ವಿಜಯಪುರ | ಸಂಪುಟ 01 | ಸಂಚಿಕೆ 287 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಬುಧವಾರ, ಜನವರಿ 10, 2024

"ಹೊನ್ನಾವರದ ಕಾಸರಕೋಡ್ ಟೊಂಕದಲ್ಲಿ ಮೀನುಗಾರರಿಗೆ ಮತ್ತು ಹೊನ್ನಾವರ ಪೋರ್ಟ್ ಪ್ರೈವೇಟ್ ಲಿಮಿಟೆಡ್ ಕಂಪನಿ ವಾಣಿಜ್ಯ ಬಂದರು ನಿರ್ಮಾಣ ವಿರೋಧಿ ಹೋರಾಟಗಾರರಿಗೆ ಕೆಲವರು ಪ್ರಾಣ ಬೆದರಿಕೆಯೊಡ್ಡಿದ್ದು ಖಂಡನೀಯ."



– ಡಾ.ಗೌತಮ್.ಆರ್.ಚೌಧರಿ
ರಾಷ್ಟ್ರೀಯ ಉಪಾಧ್ಯಕ್ಷರು,
ರಾಷ್ಟ್ರೀಯ ಮೀನುಗಾರರ ಸಂಘ

ಬಿಜೆಪಿಗೆ ತೀವ್ರ ಮುಖಭಂಗ । ಸಚಿವ ಎಂ.ಬಿ.ಪಾಟೀಲರ ಮೇಲುಗೈ । ಬಿಜೆಪಿ ಸದಸ್ಯರಿಂದ ಚುನಾವಣೆ ಬಹಿಷ್ಕಾರ

# ವಿಜಯಪುರ ಮಹಾನಗರ ಪಾಲಿಕೆ ಕಾಂಗ್ರೆಸ್ ತೆಕ್ಕೆಗೆ!

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದಲ್ಲಿ ಮಂಗಳವಾರ ನಡೆದ ವಿಜಯಪುರ ಮಹಾನಗರ ಪಾಲಿಕೆ ಮೇಯರ್–ಉಪಮೇಯರ್ ಚುನಾವಣೆಯಲ್ಲಿ ನಿರೀಕ್ಷೆಯಂತೆ ಪಕ್ಷೇತರ ಸದಸ್ಯರ ಬೆಂಬಲದೊಂದಿಗೆ ಕಾಂಗ್ರೆಸ್ ಅಧಿಕಾರದ ಗದ್ದುಗೆ ಏರಿದೆ.

ಮಹಾನಗರ ಪಾಲಿಕೆಯ ನೂತನ ಮೇಯರ್ ಆಗಿ ಕಾಂಗ್ರೆಸ್ ಪಕ್ಷದ ಮೆಹಜಬೀನ್ ಹೊರ್ತಿ, ಉಪಮೇಯರ್ ಆಗಿ ದಿನೇಶ ಹಳ್ಳಿ ಆಯ್ಕೆಯಾಗಿದ್ದಾರೆ.

ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಮಹಾಪೌರ ಸ್ಥಾನಕ್ಕೆ 34ನೇ ವಾರ್ಡಿನ ಸದಸ್ಯೆ ಮಾಹೇಜಬೀನ್ ಹೊರ್ತಿ ಹಾಗೂ ಬಿಜೆಪಿಯಿಂದ 12ನೇ ವಾರ್ಡಿನ ಸದಸ್ಯೆ ರಶ್ಮಿ ಕೋರಿ ನಾಮಪತ್ರ ಸಲ್ಲಿಸಿದ್ದರು. ಇನ್ನು ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದ್ದ ಉಪ ಮಹಾಪೌರ ಸ್ಥಾನಕ್ಕೆ 18 ನೇ ವಾರ್ಡಿನ ಸದಸ್ಯ ದಿನೇಶ ಹಳ್ಳಿ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು.

ಒಟ್ಟು 35 ಸದಸ್ಯ ಬಲದ ಮಹಾನಗರ ಪಾಲಿಕೆಗೆ 2022ರ ಅಕ್ಟೋಬರ್‌ನಲ್ಲಿ ನಡೆದ



ಚುನಾವಣೆಯಲ್ಲಿ ಬಿಜೆಪಿ 17, ಕಾಂಗ್ರೆಸ್ 10, ಎಐಎಂಐಎಂ 2, ಜೆಡಿಎಸ್ 1 ಹಾಗೂ ಪಕ್ಷೇತರರು 5 ಸ್ಥಾನದಲ್ಲಿ ಗೆಲುವು ಸಾಧಿಸಿದ್ದರು. ಯಾವೊಂದು ಪಕ್ಷಕ್ಕೂ ನಿಚ್ಚಳ ಬಹುಮತ ಇಲ್ಲದೆ ಪಾಲಿಕೆ ಅತಂತ್ರವಾಗಿತ್ತು. ಬಳಿಕ ಮೇಯರ್, ಉಪಮೇಯರ್ ಸ್ಥಾನದ ಮೀಸಲಾತಿ ಪ್ರಶ್ನಿಸಿ ಕೆಲ ಸದಸ್ಯರು ಹೈಕೋರ್ಟ್ ಮೆಟ್ಟಿಲೇರಿದ್ದ ಕಾರಣ 14 ತಿಂಗಳಿಂದ ಚುನಾವಣೆ ನಡೆದಿರಲಿಲ್ಲ.

ಮಹಾನಗರ ಪಾಲಿಕೆಯ 35 ವಾರ್ಡ್‌ಗಳಲ್ಲಿ ಕೇವಲ 10 ಕ್ಷೇತ್ರಗಳಲ್ಲಿ ಗೆಲುವಿನ ನಗೆ ಬೀರಿದರೂ ಸಹ ಕಾಂಗ್ರೆಸ್ ಪಕ್ಷದೊಂದಿಗೆ ಪಕ್ಷೇತರರು ಕೈ ಹಿಡಿದ ಪರಿಣಾಮ ಪಾಲಿಕೆಯಲ್ಲಿ ಕಾಂಗ್ರೆಸ್ ಕೈ ಮೇಲಾಗಿದೆ. ಪಕ್ಷೇತರರ ಜೊತೆಗೆ ಎಐಎಂಐಎಂ ಹಾಗೂ ಜೆಡಿ–ಎಸ್ ಓರ್ವ ಸದಸ್ಯ ಸಹ ಕಾಂಗ್ರೆಸ್‌ಗೆ ಬೆಂಬಲಿಸಿದ್ದಾರೆ.

ಅತ್ಯಧಿಕ ಸ್ಥಾನ ಗೆದ್ದು ದೊಡ್ಡ ಪಕ್ಷವಾಗಿ ಹೊರಹೊಮ್ಮಿದರೂ, ಬಿಜೆಪಿ ಮತ್ತೊಮ್ಮೆ ಪಾಲಿಕೆ ಗದ್ದುಗೆ ಹಿಡಿಯುವಲ್ಲಿ ವಿಫಲವಾಗಿದೆ.



ಕಳೆದ ವಾರ 29ನೇ ವಾರ್ಡಿನ ಬಿಜೆಪಿ ಪಾಲಿಕೆ ಸದಸ್ಯ ವಿಜಯಕುಮಾರ ಬಿರಾದಾರ ಅಕಾಲಿಕ ನಿಧನದಿಂದಾಗಿ ಬಿಜೆಪಿ ಸಂಖ್ಯಾಬಲ 16 ಕ್ಕೆ ಇಳಿದಿತ್ತು. ಈ ಹಿನ್ನೆಲೆಯಲ್ಲಿ ಚುನಾವಣೆ ನಡೆಸದಂತೆ ಬಿಜೆಪಿ ಸದಸ್ಯರು ಸಂಸದ ರಮೇಶ ಜಿಗಜಿಣಗಿ ಮತ್ತು ಶಾಸಕ ಬಸನಗೌಡ ಪಾಟೀಲ, ಯತ್ನಾಳ ಅವರ ನೇತೃತ್ವದಲ್ಲಿ ಚುನಾವಣಾಧಿಕಾರಿಯಾಗಿರುವ ಬೆಳಗಾವಿ ಪ್ರಾದೇಶಿಕ ಆಯುಕ್ತರಿಗೆ ಚುನಾವಣೆ ನಡೆಸದಂತೆ ಮನವಿ ಮಾಡಿದರು. ಆದರೆ ಆಯುಕ್ತರು ಇವರ ಮನವಿಯನ್ನು ಪುರಸ್ಕರಿಸದ ಕಾರಣ ಬಿಜೆಪಿ ಸದಸ್ಯರು ಕಪ್ಪು ಬಟ್ಟೆ ಪ್ರದರ್ಶಿಸಿ, ಚುನಾವಣಾಧಿಕಾರಿ ವಿರುದ್ಧ ಘೋಷಣೆಗಳನ್ನು ಕೂಗುತ್ತ ಚುನಾವಣೆ ಬಹಿಷ್ಕರಿಸಿ ಹೊರನಡೆದರು.

ಕೋರಂ ಅನ್ವಯ 14 ಜನ ಸದಸ್ಯರ ಹಾಜರಾತಿ ಇದ್ದ ಪರಿಣಾಮ ಚುನಾವಣಾ ಪ್ರಕ್ರಿಯೆ ಸರಾಗವಾಗಿ ಸಾಗಿತು. ಕೈ ಎತ್ತುವ ಮೂಲಕ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ 22 ಜನ ಸದಸ್ಯರು ಕೈ ಎತ್ತುವ ಮೂಲಕ ಬೆಂಬಲ ವ್ಯಕ್ತಪಡಿಸಿದರು.

ಉಪಮೇಯರ್ ಸ್ಥಾನ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿತ್ತು. ಹೀಗಾಗಿ ನಿರೀಕ್ಷೆಯಂತೆ ಈ ಕೆಟಗರಿಯಲ್ಲಿ ಓರ್ವರೇ ಸದಸ್ಯರಿರುವುದರಿಂದ ವಾರ್ಡ್ ಸಂಖ್ಯೆ 18ರ ಸದಸ್ಯ ದಿನೇಶ ಹಳ್ಳಿ ಉಪಮೇಯರ್ ಆಗಿ ಅವಿರೋಧವಾಗಿ ಆಯ್ಕೆಯಾದರು.

ಕಾಂಗ್ರೆಸ್ ಪಕ್ಷಕ್ಕೆ ಮಹಾನಗರ ಪಾಲಿಕೆ ಅಧಿಕಾರ ಖಚಿತವಾಗುತ್ತಿದ್ದಂತೆ ಪಾಲಿಕೆ ಹೊರಗಿದ್ದ ಅಧಿಕ ಕಾಂಗ್ರೆಸ್ ಕಾರ್ಯಕರ್ತರು ಗುಲಾಲು ಎರಚಿ, ಪಟಾಕಿ ಸಿಡಿಸಿ, ಪರಸ್ಪರ ಸಿಹಿ ವಿತರಿಸಿ ಸಂಭ್ರಮಿಸಿ ವಿಜಯೋತ್ಸವ ಆಚರಿಸಿದರು.

"ಚುನಾವಣಾಧಿಕಾರಿಗಳು ಕಾಂಗ್ರೆಸ್ ಕೈಗೊಂಬೆಯಾಗಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲರ ಅಣತಿಯಂತೆ ಕಾನೂನು ಬಾಹಿರವಾಗಿ ಈ ಚುನಾವಣೆ ನಡೆಸಿದ್ದಾರೆ. ಇದರ ವಿರುದ್ಧ ನಾವು ಕಾನೂನು ಹೋರಾಟ ನಡೆಸುತ್ತೇವೆ."



– ಬಸನಗೌಡ ಪಾಟೀಲ, ಯತ್ನಾಳ,
ಶಾಸಕರು, ವಿಜಯಪುರ ನಗರ

## ಮಹೇಜಬಿನ ಹೊರ್ತಿ ಮೇಯರ್, ದಿನೇಶ ಹಳ್ಳಿ ಉಪಮೇಯರ್





ವಿಜಯಪುರ: ಮಹಾನಗರ ಪಾಲಿಕೆಯ ಮಹಾಪೌರ ಹಾಗೂ ಉಪ ಮಹಾಪೌರ ಆಯ್ಕೆಗೆ ಮಂಗಳವಾರ ಜರುಗಿದ ಚುನಾವಣೆಯಲ್ಲಿ ಮಹಾಪೌರರಾಗಿ ಶ್ರೀಮತಿ ಮಹೇಜಬಿನ ಗಂ.ಅಬ್ದುಲರಜಾಕ ಹೊರ್ತಿ ಹಾಗೂ ಉಪ ಮಹಾಪೌರರಾಗಿ ಎಸ್.ದಿನೇಶ ತಂ.ಸೋಮನಿಂಗಯ್ಯ ಅವರು ಆಯ್ಕೆಯಾಗಿದ್ದಾರೆ ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.


ವಿಜಯಪುರ ಮಹಾನಗರ ಪಾಲಿಕೆ ಚುನಾವಣೆ ಅಧ್ಯಕ್ಷಾಧಿಕಾರಿ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ ಬಿ.ಶೆಟ್ಟೆಣ್ಣವರ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಮಹಾನಗರ ಪಾಲಿಕೆ ಚುನಾವಣಾ ಪ್ರಕ್ರಿಯೆಯಲ್ಲಿ ಮಹಾಪೌರ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದ ಶ್ರೀಮತಿ ಮಹೇಜಬಿನ ಗಂ.ಅಬ್ದುಲರಜಾಕ ಹೊರ್ತಿ ಅವರ ಪರವಾಗಿ 22 ಸದಸ್ಯರ ಮತ ಚಲಾಯಿಸಿದ್ದ–ರಿಂದ ಹಾಗೂ ಉಪಮಹಾಪೌರ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ ಎಸ್.ದಿನೇಶ ತಂ.ಸೋಮನಿಂಗಯ್ಯ ಅವರು ಒಬ್ಬರೇ ನಾಮಪತ್ರ ಸಲ್ಲಿಸಿರುವುದರಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಘೋಷಿಸಲಾಯಿತು.

ನಿಗದಿಯಂತೆ ಮಂಗಳವಾರ ಬೆಳಿಗ್ಗೆ 9 ರಿಂದ 11 ಗಂಟೆಯವರೆಗೆ ಮಹಾಪೌರ ಸ್ಥಾನಕ್ಕೆ 2 ಅಭ್ಯರ್ಥಿಗಳಿಂದ 5 ನಾಮಪತ್ರಗಳು ಸ್ವೀಕೃತವಾಗಿದ್ದವು. ಮಹಾಪೌರ ಸ್ಥಾನಕ್ಕೆ ಸಲ್ಲಿಕೆಯಾದ 5 ನಾಮಪತ್ರ ಹಾಗೂ ಉಪಮಹಾಪೌರ ಸ್ಥಾನಕ್ಕೆ ಸಲ್ಲಿಕೆಯಾದ 2 ನಾಮಪತ್ರಗಳು ಕ್ರಮಬದ್ಧವಾಗಿದ್ದವು. ಮದ್ಯಾಹ್ನ 1 ಗಂಟೆಗೆ ಮತದಾನ ಪ್ರಕ್ರಿಯೆಯಲ್ಲಿ ಮಹಾಪೌರ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದ ಶ್ರೀಮತಿ ಮಹೇಜಬಿನ ಗಂ.ಅಬ್ದುಲರಜಾಕ ಹೊರ್ತಿ ಅವರ ಪರವಾಗಿ 22 ಜನ ಸದಸ್ಯರು ಮತ ಚಲಾಯಿಸಿದ್ದ–ರಿಂದ ಅತಿ ಹೆಚ್ಚು ಮತಗಳನ್ನು ಪಡೆಯುವ ಮೂಲಕ ಮಹಾಪೌರ ಸ್ಥಾನಕ್ಕೆ ಆಯ್ಕೆಯಾಗಿದ್ದಾರೆಂದು ಘೋಷಿಸಲಾಗಿದೆ. ಮಹಾಪೌರ ಸ್ಥಾನಕ್ಕೆ ಶ್ರೀಮತಿ ರಶ್ಮಿ ಗಂ.ಬಸವರಾಜ ಕೋರಿ ಅವರು 02 ನಾಮಪತ್ರಗಳು ಸಲ್ಲಿಸಿದ್ದರು. ಇವರ ವಿರೋಧವಾಗಿ 22 ಜನ ಸದಸ್ಯರು ಮತ ಚಲಾಯಿಸಿದರು ಎಂದು ಅವರು ತಿಳಿಸಿದ್ದಾರೆ.

## ರಾಜ ನುಡಿ

ರಾವಣನು ಋಷಿ ಮುನಿಯ ವೇಷಧರಿಸಿ ಸೀತೆಯನ್ನು ಅಪಹರಿಸಿದಂತೆ, ಕೆಟ್ಟತನವು ತನ್ನ ಕೆಟ್ಟತನಕ್ಕೆ ಒಳ್ಳೆಯ ಮುಖವಾಡವನ್ನೇ ಬಳಸುತ್ತದೆ. ಯಾವುದಕ್ಕೂ ಲಕ್ಷ್ಮಣ ರೇಖೆಯೆಂಬ ವಿವೇಚನೆಯ ಸ್ವನಿಯಂತ್ರಣ ದಾಟದಿರೋಣ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 275

*ಸಮರತಿ ಸಮಕಳೆ ಸಮಸುಖವನರಿಯದ ಲಿಂಗವ ಪೂಜಿಸಿ ಫಲವೇನಯ್ಯಾ,*

*ಲಿಂಗವ ಪೂಜಿಸಿ ಫಲವೇನಯ್ಯಾ,*
*ಸಮರತಿ ಸಮಕಳೆ ಸಮಸುಖವನರಿಯದನ್ನಕ್ಕ*
*ಲಿಂಗವ ಪೂಜಿಸಿ ಫಲವೇನಯ್ಯಾ,*
*ಕೂಡಲಸಂಗಮದೇವರ ಪೂಜಿಸಿ*
*ನದಿಯೊಳಗೆ ನದಿ ಬೆರಸಿದಂತಾಗದನ್ನಕ್ಕ.*
*– ಬಸವಣ್ಣನವರು*

ಕಾಯದೊಳಗಿನ ಆತ್ಮದ ಪ್ರತಿಕವಾದ ಪ್ರಾಣಲಿಂಗ ಮತ್ತು ವಿಶ್ವಚಾಲನಾ ಶಕ್ತಿಯಾದ ಮಹಾಲಿಂಗಗಳನ್ನು ಕೂಡಿಸುವ ಸಾಧನ ಇಷ್ಟಲಿಂಗ. ಲಿಂಗವ ಪೂಜಿಸುವುದೆಂದರೆ ಅಂಗಭಾವ ಅಳಿದು ಲಿಂಗಭಾವ ಒಡಮೂಡಿಸುವುದು. ಅಲ್ಲಿ ಅಂಗ ಮತ್ತು ಲಿಂಗವೆನ್ನುವ ಭಿನ್ನಭಾವ ಅಳಿಯಬೇಕು. ಭಿನ್ನವಾದ ಎರಡು ನದಿಗಳು ಒಂದೆಡೆ ಸಂಗಮಿಸಿ ಎರಡಳಿದು ಒಂದಾಗಿ ಮುಂದೆ ಹರಿಯುವಾಗ ಅವುಗಳನ್ನು ಬೇರ್ಪಡಿಸಲು ಹೇಗೆ ಸಾಧ್ಯವಿಲ್ಲವೋ ಹಾಗೇ ಅಂಗ ಮತ್ತು ಲಿಂಗಗಳು ಒಂದಾಗಿಸುವಲ್ಲಿ ಸಮರತಿ ಸಮಕಳೆ ಸಮಸುಖವ ನೀಡಬೇಕು. ಇಂತಹ ಪರಿಣಾಮವ ನೀಡದ ಲಿಂಗವ ಪೂಜಿಸಿ ಫಲವೇನು ಎಂದು ಬಸವಣ್ಣನವರು ಇಲ್ಲಿ ಪ್ರಶ್ನಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹಿಸಿ ಮನವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಉತ್ತರ ಕರ್ನಾಟಕ ಕೃಷಿ, ಶಿಕ್ಷಣ, ಸಾರಿಗೆ,ರೈಲು, ಆಡಳಿತರಾಜಕೀಯ, ಆಧ್ಯಾತ್ಮಿಕ ಮಾಧ್ಯಮ, ಉದ್ಯಮ, ಚಲನಚಿತ್ರ ಹಲವಾರು ಕ್ಷೇತ್ರಗಳಲ್ಲಿ ಆಗಿರುವ ಅನ್ಯಾಯ, ತಾರತಮ್ಯ ಮತ್ತು ಮಲತಾಯಿ ಧೋರಣೆ ಪ್ರತಿಭಟಿಸಿ ಪ್ರತ್ಯೇಕ ಉತ್ತರ ಕರ್ನಾಟಕ ರಾಜ್ಯಕ್ಕಾಗಿ ಆಗ್ರಹಿಸಿ ಮಂಗಳವಾರ ಸಂಸದ ರಮೇಶ ಜಿಗಜಿಣಗಿ ಕಚೇರಿಯಲ್ಲಿ ಉತ್ತರ ಕರ್ನಾಟಕ ಹೋರಾಟ ಸಮಿತಿ ರಾಜ್ಯ ಮತ್ತು ಜಿಲ್ಲಾ ಘಟಕಗಳ ಪದಾಧಿಕಾರಿಗಳು ಮನವಿ ಸಲ್ಲಿಸಿದರು.


ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ರಾಜ್ಯ ಹೋರಾಟ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗೇಶ ಗೊಲಶೆಟ್ಟಿ, ವಿಜಯಪುರ ಜಿಲ್ಲಾ ಅಧ್ಯಕ್ಷ ಕಾಮಣ್ಣ ಗಂಗನಹಳ್ಳಿ, ಮಾಧ್ಯಮ ಸಲಹೆಗಾರ ಬಸವರಾಜ ಕನಕವಾಡಿ, ದೇವಕಾಂತ ಬಿಜ್ಜರಗಿ, ನ್ಯಾಯವಾದಿ ದಾನೇಶ ಅವಟಿ, ಸೋಮು ಜಗದಾಳ, ಗುರುಪಾದ ಕಲಾದಗಿ, ಬಾಬು ಚನ್ನಪ್ಪ ಗೌಡ, ಮೊದಲಾದರಿದ್ದರು.



# ಮೀನುಗಾರರಿಗೆ ಪ್ರಾಣಬೆದರಿಕೆ ಖಂಡನಾರ್ಹ :ಡಾ.ಗೌತಮ್ ಚೌಧರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಹೊನ್ನಾವರದ ಕಾಸರಕೋಡ್ ಟೊಂಕದಲ್ಲಿ ಮೀನುಗಾರರಿಗೆ ಮತ್ತು ವಾಣಿಜ್ಯ ಬಂದರು ವಿರೋಧಿ ಹೋರಾಟಗಾರರಿಗೆ ಕೆಲವು ಅಪರಿಚಿತ ವ್ಯಕ್ತಿಗಳು ತಾವು ಭೂಗತ ಲೋಕದವರು, ಹೊನ್ನಾವರ ಪೋರ್ಟ್ ಪ್ರೈವೇಟ್ ಲಿಮಿಟೆಡ್ ಕಂಪನಿ ಅವರ ವಾಣಿಜ್ಯ ಬಂದರು ನಿರ್ಮಾಣ–ಕ್ಕೆ ಮತ್ತು ರಸ್ತೆ ಕಾಮಗಾರಿಕೆಗೆ ಅಡ್ಡಿಪಡಿಸಿದರೆ ಪ್ರಾಣಬೆದ–ರಿಕೆಯೊಡ್ಡಿ ಹೆದರಿಸಲು ಪ್ರಯತ್ನಿಸಿದ್ದು ಖಂಡನೀಯ ಎಂದು ರಾಷ್ಟ್ರೀಯ ಮೀನುಗಾರರ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ಡಾ.ಗೌತಮ್.ಆರ್.ಚೌಧರಿ ತಿಳಿಸಿದ್ದಾರೆ.



ಮಂಗಳವಾರ ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಇದೇ ವೇಳೆ ಮೀನುಗಾರಿಕೆ ಸಚಿವ

ಮಂಕಾಳ ವೈದ್ಯ ಘಟನಾ ಸ್ಥಳದಲ್ಲಿದ್ದು, ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಕ್ರಮಕೈಗೊಳ್ಳಬೇಕೆಂದು ಆದೇಶಿಸಿರುವುದು ಸ್ವಾಗತಾರ್ಹವಾಗಿದೆ ಎಂದರು.

ಆದರೆ ಮೀನುಗಾರರ ಹಿತರಕ್ಷಣೆಗಾಗಿ ಯಾವುದೇ ಒತ್ತಡ ಹಾಗೂ ಶಿಫಾರಸುಗಳಿಗೆ ಮಣಿಯದೆ ಮುಂದೆ ಇಂತಹ ಅಹಿತಕರ ಘಟನೆಗಳು ನಡೆಯದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮುಖ್ಯಮಂತ್ರಿಗಳಲ್ಲಿ ಹಾಗೂ ಮೀನುಗಾರಿಕೆ ಸಚಿವರಿಗೆ ಡಾ.ಗೌತಮ್. ಆರ್.ಚೌಧರಿ ಆಗ್ರಹಿಸಿದ್ದಾರೆ.

28ನೇ ರಾಷ್ಟ್ರೀಯ ರೋಡ್ ಸೈಕ್ಲಿಂಗ್ ಚಾಂಪಿಯನಶಿಪ್ ಉದ್ಘಾಟಿಸಿದ ಸಚಿವ ಎಂ.ಬಿ.ಪಾಟೀಲ ಸ್ಪಷ್ಟನೆ

# ಸೈಕ್ಲಿಂಗ್ ವೆಲೊಡ್ರಂ ಕಾಮಗಾರಿ ಶೀಘ್ರವೇ ಪೂರ್ಣ

**ಉದಯರಶ್ಮಿ ನ್ಯೂಸ್**




ವಿಜಯಪುರ: ನಗರದಲ್ಲಿ ಸೈಕ್ಲಿಂಗ್ ಅಕ್ಯಾಡೆಮಿ ಸ್ಥಾಪಿಸಲು ಮುಖ್ಯಮಂತ್ರಿಗಳು ಮತ್ತು ಕ್ರೀಡಾ ಸಚಿವರ ಜೊತೆ ಚರ್ಚಿಸಿ ಶೀಘ್ರದಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ನಗರದಲ್ಲಿ ಮಂಗಳವಾರ ಆರಂಭವಾದ ನಾಲ್ಕು ದಿನಗಳ 28ನೇ ರಾಷ್ಟ್ರೀಯ ರೋಡ್ ಸೈಕ್ಲಿಂಗ್ ಚಾಂಪಿಯನಶಿಪ್ 2023–24 ಉದ್ಘಾಟನೆ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿಜಯಪುರದಲ್ಲಿ ಸೈಕ್ಲಿಂಗ್ ವೆಲೊಡ್ರಂ ಕಾಮಗಾರಿ ಶೀಘ್ರದಲ್ಲಿ ಪೂರ್ಣವಾಗಲಿದೆ. ಅದಕ್ಕೆ ಅಗತ್ಯವಾಗಿರುವ ಹೆಚ್ಚಿನ ಅನುದಾನವನ್ನು ಸರಕಾರ ನೀಡಲಿದೆ. ದೇಶದ ಇತರ ರಾಜ್ಯಗಳಿಗೆ ಹೋಲಿಸಿದರೆ ವಿಜಯಪುರದಲ್ಲಿ ಸೈಕ್ಲಿಂಗ್ ಕ್ರೀಡಾಪಟುಗಳಿಗೆ ಬೇಕಿರುವ ಅತ್ಯುತ್ತಮ ಹವಾಮಾನ ಮತ್ತು ಪೂರಕ ವಾತಾರವಣವಿದೆ. ಅಲ್ಲದೇ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಸೈಕ್ಲಿಸ್ಟಗಳು ರೋಡ್ ಸೈಕ್ಲಿಂಗ್ ನಲ್ಲಿ ರಾಷ್ಟ್ರಾದ್ಯಂತ ಹೆಸರು ಮಾಡಿದ್ದಾರೆ. ಇಲ್ಲಿ ಸೈಕ್ಲಿಂಗ್ ಅಕ್ಯಾಡೆಮಿ ಸ್ಥಾಪನೆಯಿಂದ ರೋಡ್ ಸೈಕ್ಲಿಂಗ್, ವೆಲೋಡ್ರಂ ಸೈಕ್ಲಿಂಗ್ ಮತ್ತು ಗುಡ್ಡಗಾಡು ಸೈಕ್ಲಿಂಗ್ ಸ್ಪರ್ಧೆಗಳಿಗೂ ಅನುಕೂಲವಾಗಲಿದೆ. ಈ ಅಕ್ಯಾಡೆಮಿ ಸ್ಥಾಪನೆಯಿಂದ ಅಂತಾರಾಷ್ಟ್ರೀಯ ಗುಣಮಟ್ಟದ ಸೌಲಭ್ಯಗಳು ಸೈಕ್ಲಿಷ್ಟ್‌ಗಳಿಗೆ ಸಿಗಲಿವೆ. ಅಲ್ಲದೇ, ಸ್ಥಳೀಯ ಬಡ ಮತ್ತು ಪ್ರತಿಭಾವಂತ ಕ್ರೀಡಾಪಟುಗಳಿಗೆ ಸಾಕಷ್ಟು ಪ್ರೋತ್ಸಾಹ ಸಿಗಲಿದೆ. ಇದಕ್ಕಾಗಿ ಇಲಾಖೆಯ ಸಿಎ□□□ರ್(ಅಖಖ) ಫಂಡ್ ಮತ್ತು ಬಿ.ಎಲ್.ಡಿ.ಇ ಸಂಸ್ಥೆಯಿಂದಲೂ ನೆರವು ನೀಡಲಾಗುವುದು ಎಂದು ಅವರು ತಿಳಿಸಿದರು.

ಕ್ರೀಡಾಕೂಟಗಳಲ್ಲಿ ಉತ್ತಮ ಪ್ರದರ್ಶನ ತೋರುವ ಓರ್ವ ಕ್ರೀಡಾಪಟು ಮತ್ತು ತಂಡ ಗೆಲ್ಲಬಹುದು. ಆದರೆ, ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಬಹುಮುಖ್ಯವಾಗಿದೆ ದೇಶದ ನಾನಾ ರಾಜ್ಯಗಳಿಂದ ಇಲ್ಲಿಗೆ ಬಂದಿರುವ ಕ್ರೀಡಾಪಟುಗಳು ಇಲ್ಲಿನ ಗೋಳಗುಮ್ಮಟ, ಕಪ್ಪು ತಾಜಮಹಲ್ ಎಂದೇ ಹೆಸರಾಗಿರುವ ಇಬ್ರಾಹಿಂ ರೋಜಾ, ಬಾರಾ ಕಮಾನ್ ಸೇರಿದಂತೆ ಇತರ ಪ್ರವಾಸಿ ತಾಣಗಳಿಗೂ ಭೇಟಿ ನೀಡಿ ಸುಂದರ ನೆನಪುಗಳೊಂದಿಗೆ ನಿಮ್ಮೂರಿಗೆ ಮರಳಿರಿ ಎಂದು ಎಂ. ಬಿ. ಪಾಟೀಲ ಹೇಳಿದರು.

ಸೈಕ್ಲಿಂಗ್ ಸಂಸ್ಥೆಯ ರಾಜ್ಯಾಧ್ಯಕ್ಷ ರಾಜು ಬಿರಾದಾರ ಮಾತನಾಡಿ, ಜಿಲ್ಲೆಯಲ್ಲಿ ಸಚಿವ ಎಂ. ಬಿ. ಪಾಟೀಲ ಮತ್ತಿತರರು ಸೈಕ್ಲಿಂಗ್ ಕ್ರೀಡೆಗೆ ಸಾಕಷ್ಟು ಸಹಾಯ ಮಾಡುತ್ತಿದ್ದಾರೆ. ಹೀಗಾಗಿ ಈವರೆಗೆ ನಡೆದ ಒಟ್ಟು 28 ರಾಷ್ಟ್ರೀಯ ರೋಡ್ ಸೈಕ್ಲಿಂಗ್ ಕ್ರೀಡಾಕೂಟಗಳಲ್ಲಿ ವಿಜಯಪುರ ಜಿಲ್ಲೆಯ ಸೈಕ್ಲಿಷ್ಟ್ ಗಳು 13 ಬಾರಿ ಜನರಲ್ ಚಾಂಪಿಯನ್ನಾಗಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ ಎಂದು ತಿಳಿಸಿದರು.

ಸೈಕ್ಲಿಂಗ್ ಫೆಡರೇಷನ್ ಆಫ್ ಇಂಡಿಯಾ ಪ್ರಧಾನ ಕಾರ್ಯದರ್ಶಿ ಮಣಿಂದರಪಾಲಸಿಂಗ್, ಶಾಸಕ ವಿಠ್ಠಲ ಕಟಕದೊಂಡ, ಪ್ರಕಾಶ ರಾಠೋಡ, ರಾಜ್ಯ ಸೈಕ್ಲಿಂಗ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶ್ರೀಶೈಲ ಕುರಣಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಸಚಿವರು ನಾನಾ ರಾಜ್ಯಗಳಿಂದ ಆಗಮಿಸಿದ ಸೈಕ್ಲಿಷ್ಟಗಳ ಜೊತೆ ಸೈಕ್ಲಿಂಗ್ ವಿಷಯಗಳ ಕುರಿತು ಮಾಹಿತಿ ಪಡೆದರು.

# ಸಿದ್ಧೇಶ್ವರ ಶ್ರೀ ನಡೆ–ನುಡಿ ಎಲ್ಲರ ಬದುಕಿಗೆ ದಾರಿದೀಪ

**ಉದಯರಶ್ಮಿ ನ್ಯೂಸ್**




ದೇವರಹಿಪ್ಪರಗಿ: ಸಿದ್ಧೇಶ್ವರ ಸ್ವಾಮೀಜಿಯವರ ನಡೆ, ನುಡಿ ನಮ್ಮೆಲ್ಲರ ಬದುಕಿಗೆ ದಾರಿದೀಪವಾಗಿವೆ ಎಂದು ಶ್ರೀಸಿದ್ಧೇಶ್ವರ ಸ್ವಾಮೀಜಿ ಪ್ರೌಢಶಾಲೆಯ ಸಂಸ್ಥಾಪಕ ಅಧ್ಯಕ್ಷ ವ್ಹಿ.ಕೆ.ಪಾಟೀಲ ಹೇಳಿದರು.

ಪಟ್ಟಣದ ಶ್ರೀಸಿದ್ಧೇಶ್ವರ ಸ್ವಾಮೀಜಿ ಪ್ರೌಢಶಾಲೆಯ ಆವರಣದಲ್ಲಿ ಸೋಮವಾರ ಜರುಗಿದ ಮಾಸಿಕ ಪಾಲಕರ ಸಭೆಯಲ್ಲಿ ಅಧ್ಯಕ್ಷತೆ ವಹಿಸಿಕೊಂಡು ಸಿದ್ಧೇಶ್ವರ ಸ್ವಾಮೀಜಿ ಅವರಿಗೆ ಪೂಜೆ ಹಾಗೂ ನುಡಿನಮನ ಸಲ್ಲಿಸಿ ಅವರು ಮಾತನಾಡಿದರು.

ಸಂಸ್ಥೆಯಲ್ಲಿ ಅಧ್ಯಯನಿಸುವ ಪ್ರತಿ ಮಗುವಿಗೆ ಸ್ವಾಮೀಜಿಗಳ ಆಶಯದಂತೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಲು ಸಿಬ್ಬಂದಿಗಳು ಸೇರಿದಂತೆ ಪಾಲಕರ ಆಶಯವಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಸಹಕಾರ ನೀಡಬೇಕು ಎಂದರು.

ಶಿಕ್ಷಕರಾದ ವಿವೇಕಾನಂದ ಹಿರೇಮಠ, ಶ್ರೀಕಾಂತ ತೋಳನೂರ ಮಾತನಾಡಿ, ಮಕ್ಕಳ ಸಾಮರ್ಥ್ಯಕ್ಕೆ ಅನುಗುಣವಾಗಿ ಸಹನೆಯಿಂದ ಶಿಕ್ಷಣ ನೀಡಿದಾಗ ಪ್ರತಿ ಮಗು ಪರಿಪೂರ್ಣನಾಗುವುದರಲ್ಲಿ ಸಂದೇಹವಿಲ್ಲ. ಯಾವುದೇ ಕಾರಣ–ಕ್ಕೂ ಮಕ್ಕಳ ಬುದ್ಧಿವಂತಿಕೆಯ ಬಗ್ಗೆ ಪಾಲಕರು ನಿರ್ಲಕ್ಷ್ಯ ತಾಳಬಾರದು ಎಂದರು.

ನಂತರ ಪ್ರಾಥಮಿಕ ಹಾಗೂ ಮಾಧ್ಯಮಿಕ ವಿಭಾಗಗಳ ಮಾಸಿಕ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ತೋರಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಶಿಕ್ಷಕ ಕಾಶೀನಾಥ ಯಂಭತ್ನಾಳ ಮಾರ್ಗದರ್ಶನದಲ್ಲಿ ವಿಜ್ಞಾನದ ವಿವಿಧ ವಿಷಯಗಳ ಮೇಲೆ ವಿದ್ಯಾರ್ಥಿಗಳು ಬಿಡಿಸಿದ ರಂಗೋಲಿ ಚಿತ್ರಗಳು ಗಮನ ಸೆಳೆದವು.

ಶಿಕ್ಷಕರಾದ ಮಹಾಂತೇಶ ಬೀಳಗಿಮಠ, ಆನಂದ ಎ.ಕೆ, ಎಂ.ಎಸ್.ಪಾಟೀಲ, ರವಿ ಅಲೇಗಾಂವಿ, ಪಾಲಕರ ಪ್ರತಿನಿಧಿ ಎಂ.ಬಿ.ಬಿರಾದಾರ ಸೇರಿದಂತೆ ಸಿಬ್ಬಂದಿ, ಮಕ್ಕಳು ಹಾಗೂ ಪಾಲಕರು ಇದ್ದರು.

# ಪಿಕೆಪಿಎಸ್: ಛಾಯಾಗೋಳ ಅವಿರೋಧ ಆಯ್ಕೆ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಕೋರವಾರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಅಧ್ಯಕ್ಷರಾಗಿ ಸತತ ಮೂರನೇ ಬಾರಿಗೆ ಅವಿರೋಧವಾಗಿ ಸಂಗಮೇಶ್ ಛಾಯಾಗೊಳ್ ಆಯ್ಕೆಯಾದರು.

ಮಂಗಳವಾರ ಜರುಗಿದ ಚುನಾವಣಾ ಪ್ರಕ್ರಿಯೆಯಲ್ಲಿ ಉಪಾಧ್ಯಕ್ಷರಾಗಿ ಶರಣಪ್ಪ ತಾಳಿಕೋಟಿ ನೂತನ ಸದಸ್ಯರಾಗಿ ಸುಬ್ಬನಗೌಡ ಪೊಲೀಸ್ ಪಾಟೀಲ್, ನಾನಾಗೌಡ ಬೋರಾವತ್, ಶರಣಬಸವ ಸುಂಬಡ, ಗುರಣ್ಣ ಅಂಗಡಿ, ಸೋಮಶೇಖರ್ ಹಿರೇಮಠ, ಬಾಬಾಸಾಹೇಬ್ ಕೋಟಗಿ, ಇಸ್ಮಾಯಿಲ್ ವಡಗೇರಿ, ಚಿದಾನಂದ ಚವ್ಹಾಣ್, ಭೀಮರಾಯ ತಳವಾರ್ ಆಯ್ಕೆಯಾದರು. ನಂತರ ಇವರನ್ನು ಸನ್ಮಾನಿಸಲಾಯಿತು. ಚುನಾವಣಾಧಿಕಾ–ರಿಗಳಾಗಿ ಲೀಲಾವತಿಗೌಡ ಕಾರ್ಯನಿರ್ವಹಿಸಿದರು.

ಗ್ರಾಮದ ಪ್ರಮುಖರಾದ ಮಲ್ಲನಗೌಡ ಬಿರಾದರ್, ಅಪ್ಪುಗೌಡ ಪಾಟೀಲ್, ಶ್ರೀನಾಥ್‌ಗೌಡ ಪಾಟೀಲ, ಹನುಮಂತರಾಯ ಪಾಟೀಲ, ಭೋಜಪ್ಪಗೌಡ ಬಿರಾದಾರ, ಬಸನಗೌಡ ಬಿರಾದಾರ, ಶರಣಗೌಡ ಪಾಟೀಲ, ಸಂಗಮೇಶ ಮ್ಯಾಗೇರಿ, ಬಿ.ಸಿ.ಹೊನಮಟ್ಟಿ, ಪ್ರಭುಲಿಂಗಯ್ಯ ಮೇಲಿನಮಠ, ಮತ್ತು ರೈತ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರು ಭಾಗವಹಿಸಿದ್ದರು

# ವಿಕಸಿತ ಭಾರತ ಸಂಕಲ್ಪ ಯಾತ್ರೆಗೆ ಶಾಸಕ ಸವದಿ ಚಾಲನೆ

**ಉದಯರಶ್ಮಿ ನ್ಯೂಸ್**



ಚಿಮ್ಮಡ: ಪ್ರಧಾನಿ ಮೋದಿಯವರು ಸರ್ವ ಧರ್ಮಿಯರಿಗೂ ಜನಪರ ಯೋಜನೆಗಳನ್ನು ಜಾರಿ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ಪೂರಕ ವಾತಾವರಣ ಸೃಷ್ಠಿಸುತಿದ್ದಾರೆಂದು ತೇರದಾಳ ಶಾಸಕ ಸಿದ್ದು ಸವದಿ ಹೇಳಿದರು.

ಇಲ್ಲಿನ ಗ್ರಾಮ ಪಂಚಾಯತಿ ಆವರಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ವಿಕಸಿತ ಭಾರತ ಸಂಕಲ್ಪ ಯಾತ್ರೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯಾವುದೇ ಜಾತಿ ಧರ್ಮ ಭೇದವಿಲ್ಲದೇ ಯೋಜನೆಗಳನ್ನು ರೂಪಿಸುತ್ತಾ ಕೇಂದ್ರ ಸರಕಾರ ಬಲಿಷ್ಠ ಭಾರತ ನಿರ್ಮಾಣಕ್ಕೆ ಘನ ತೊಟ್ಟಿದೆ, ಮಹಿಳಾ ಸಬಲಿಕರಣ–ಕ್ಕೆ ಹೆಚ್ಚು ಉತ್ತೇಜನ ನೀಡುತ್ತಿರುವ ಸರಕಾರ, ರೈತರ ಆದಾಯ ವೃದ್ಧಿಗೂ ಅದ್ಯತೆ ನೀಡಿದೆ. ಜೊತೆಗೆ 370 ಕಲಂ ರದ್ದುಗೊಳಿಸುವ ಮೂಲಕ ಕಾಶ್ಮೀರವನ್ನು ದೇಶದೊಂದಿಗೆ ಜೋಡಿಸಿಕೊಂಡಿದೆಯಲ್ಲದೇ. ರಾಮಮಂದಿರ ನಿರ್ಮಿಸುವ ಮೂಲಕ ಬಹುಸಂಖ್ಯಾತ ಹಿಂದುಗಳ ಭಾವನೆಗೂ ಬೆಲೆ ನೀಡುವ ಮೂಲಕ ದೇಶವನ್ನು ಸರ್ವ ಸಂಪನ್ನಗೊಳಿಸುತ್ತಿದೆ. ಬಡವರ ಕಲ್ಯಾಣ, ಆರೋಗ್ಯ, ಆಹಾರ ಭದ್ರತೆ, ಯುವಕರಿಗೆ ಸ್ವಯಂ ಉದ್ಯೋಗ, ಹೊಸ ಉದ್ದಿಮೆಗಳನ್ನು ಪ್ರಾರಂಭಿಸುವ ಮೂಲಕ ದೇಶವು ಪ್ರಗತಿಯ ಹಾದಿಯಲ್ಲಿ ಮುನ್ನಡೆಯುತ್ತಿದೆ ಎಂದರು.

ಕೆನರಾ ಬ್ಯಾಂಕ ಹಿರಿಯ ವ್ಯವಸ್ಥಾಪಕ ಶ್ರೀಮತಿ ಉಮಾದೇವಿ, ಶಾಖಾವ್ಯವಸ್ಥಾಪಕರಾದ ಆಶಾ, ಕ್ಷೇತ್ರಾಧಿಕಾರಿ ರಾಖಿ, ಆನಂದ, ಸ್ಥಳಿಯ ಕೆವಿಜಿ ಶಾಖಾ ವ್ಯವಸ್ಥಾಪಕ ಎಸ್.ಐ.ಗಡ್ಡಿ, ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಮಾಲಾ ಮೋಟಗಿ, ಅಭಿವೃದ್ದಿ ಅಧಿಕಾರಿ ಶಿವಾನಂದ ಬಿರಾದರ, ಗ್ರಾಮ ಆಡಳಿತ ಅಧಿಕಾರಿ ಮಂಜುನಾಥ ನೀಲನ್ನವರ, ಗ್ರಾಮದ ಪ್ರಮುಖರಾದ ರಾಮಣ್ಣ ಮುಗಳಖೋಡ, ಗ್ರಾ.ಪಂ. ಮಾಜಿ ಅಧ್ಯಕ್ಷ ಗುರಲಿಂಗಪ್ಪಾ ಪೂಜಾರಿ, ಆನಂದ ಕವಟಿ, ಬೀರಪ್ಪಾ ಹಳೆಮನಿ, ಎಪಿಎಂಸಿ ನಿರ್ದೇಶಕ ಪ್ರಭು ಮುಧೋಳ, ಪ್ರಕಾಶ ಪಾಟೀಲ, ನಿಂಗಣ್ಣ ಪೂಜಾರಿ, ಅಶೋಕ ಮೋಟಗಿ, ಪ್ರಭು ನೇಸೂರ, ರಾಚಯ್ಯ ಮಠಪತಿ, ಪರಪ್ಪಾ ಮುಗಳಖೋಡ,ಸುರೇಶ ಅಕ್ಕಿವಾಟ, ಆನಂದ ಕಂಪು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ವಿಕಸಿತ ಭಾರತ ನಿರ್ಮಾಣಕ್ಕೆ ಪಣ ತೊಡುವ ಪ್ರತಿಜ್ಞಾವಿಧಿ ಭೋದಿಸಲಾಯಿತು. ಹಾಗೂ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ರೈತರು ಡ್ರೋನ ಮೂಲಕ ರಾಸಾಯಣಿಕ ಸಿಂಪರಣೆ ಮಾಡುವ ವಿಧಾನದ ಪ್ರಾತ್ಯಕ್ಷತೆಯನ್ನು ಪ್ರದರ್ಶಿಸಲಾಯಿತು.

# ಶಾಲೆಯ ಪ್ರಗತಿಗೆ ಸಮುದಾಯದ ಸಹಭಾಗಿತ್ವ ಮುಖ್ಯ



**ಉದಯರಶ್ಮಿ ನ್ಯೂಸ್**

ಇಂಡಿ: ತಾಲೂಕಿನ ಹಿರೇರೂಗಿ ಗ್ರಾಮದ ಕೆಜಿಎಸ್ ಶಾಲೆಯ ಎಸ್‌ಡಿಎಂಸಿ ನೂತನ ಅಧ್ಯಕ್ಷರಾಗಿ ಸುದರ್ಶನ ಬೇನೂರ ಮತ್ತು ಉಪಾಧ್ಯಕ್ಷರಾಗಿ ಪರಶುರಾಮ ಹೊಸಮನಿ ಆಯ್ಕೆಯಾಗಿದ್ದಾರೆ ಎಂದು ಶಾಲಾ ಮುಖ್ಯಶಿಕ್ಷಕಿ ವಿ.ವೈ. ಪತ್ತಾರ ತಿಳಿಸಿದ್ದಾರೆ.

ಮಂಗಳವಾರ ಶಾಲೆಯಲ್ಲಿ ಎಸ್‌ಡಿಎಂಸಿ ರಚನಾ ಸಭೆ ನಡೆಯಿತು. ಎಲ್ಲರ ಸಹಮತದೊಂದಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದ ಜೊತೆಗೆ ಸದಸ್ಯರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿದ ನೂತನ ಅಧ್ಯಕ್ಷ ಸುದರ್ಶನ ಬೇನೂರ ಮಾತನಾಡಿ, ಎಲ್ಲರ ಸಹಕಾರದೊಂದಿಗೆ ಶಾಲಾಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಉಪಾಧ್ಯಕ್ಷ ಪರಶುರಾಮ ಹೊಸಮನಿ ಮಾತನಾಡಿ, ಶಾಲೆಯ ಅಗತ್ಯತೆಯನ್ನು ಮನಗಂಡು, ಸಮುದಾಯದ ಸಹಭಾಗಿತ್ವದೊಂದಿಗೆ ಶಾಲೆಯ ಪ್ರಗತಿಗೆ ಶ್ರಮಿಸುತ್ತೇನೆ ಎಂದರು.

ಶಿಕ್ಷಕ ಸಂತೋಷ ಬಂಡೆ ಅವರು ಎಸ್‌ಡಿಎಂಸಿ ರಚನೆ, ಅಧಿಕಾರ ಮತ್ತು ಕರ್ತವ್ಯಗಳು, ಸರ್ಕಾರದ ಪ್ರೋತ್ಸಾಹದಾಯಕ ಕಾರ್ಯಕ್ರಮಗಳು, ಶಿಕ್ಷಣದ ಸಾರ್ವತ್ರೀಕರಣದಲ್ಲಿ ಪ್ರಾಥ–ಮಿಕ ಶಿಕ್ಷಣದ ಮಹತ್ವದ ಜೊತೆಗೆ ಅನೇಕ ಶೈಕ್ಷಣಿಕ ರೂಪುರೇಷೆಗಳ ಕುರಿತು ಮಾಹಿತಿ ನೀಡಿದರು.

ಶಿಕ್ಷಕ ಎಸ್.ಆರ್. ಚಾಳೇಕರ ಮಾತನಾಡಿ, ಸರಕಾರಿ ಶಾಲೆಗಳ ಶೈಕ್ಷಣಿಕ ಪ್ರಗತಿ ಹಾಗೂ ಶಾಲೆಯ ಮೂಲಭೂತ ಸಮಸ್ಯೆಗಳನ್ನು ಬಗೆಹರಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಪ್ರತಿಯೊಂದು ಶಾಲೆಯಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಗಳನ್ನು ರಚಿಸಲಾಗುತ್ತಿದೆ. ಶಾಲೆಗಳ ವಾತಾವರಣವನ್ನು ಸುರಕ್ಷಿತವಾಗಿ ಕಾಪಾಡಿಕೊಳ್ಳುವಲ್ಲಿ ಗ್ರಾಮಸ್ಥರ ಪಾತ್ರ ಬಹುಮುಖ್ಯ ಎಂದು ಹೇಳಿದರು.

ಯುವ ಮುಖಂಡರಾದ ಪರಶುರಾಮ ಹೊಸಮನಿ, ಸಂತೋಷ ಕೋಟಗೊಂಡ, ಶಾಲಾ ಮುಖ್ಯ ಶಿಕ್ಷಕಿ ವಿ.ವೈ. ಪತ್ತಾರ, ಕೆಬಿಎಸ್ ಮುಖ್ಯ ಶಿಕ್ಷಕ ಅನಿಲ ಪತಂಗಿ, ಶಿಕ್ಷಕರಾದ ಎಸ್.ಎಂ. ಪಂಚಮುಖಿ, ಎಸ್.ಡಿ. ಬಿರಾದಾರ, ಎಸ್.ಬಿ. ಕುಲಕರ್ಣಿ, ಯಲ್ಲಮ್ಮ ಸಾಲೋಟಗಿ, ಸಂತೋಷ ಬಿರಾದಾರ ಸೇರಿದಂತೆ ಎಲ್ಲ ಪಾಲಕರು ಉಪಸ್ಥಿತರಿದ್ದರು.

# ಸರಕಾರದ ಯೋಜನೆಗಳ ಸದ್ಬಳಕೆ ಮಾಡಿಕೊಳ್ಳಿ :ಡಾ.ನಾಗರಾಜ

**ಉದಯರಶ್ಮಿ ನ್ಯೂಸ್**



ಸಿಂದಗಿ: ಮಹಿಳೆಯರ ಮತ್ತು ಗರ್ಭಿಣಿಯರ ಅನುಕೂಲಕ್ಕಾಗಿ ಸರಕಾರ ಅನೇಕ ಯೋಜನೆಗಳನ್ನು ರೂಪಿಸಿದೆ. ಆರೋಗ್ಯ ಸಮಸ್ಯೆಯಿಂದ ಯಾವುದೇ ಗರ್ಭಿಣಿ, ತಾಯಂದಿರು ಮತ್ತು ಶಿಶು ಮರಣವಾಗದಂತೆ ವಿಶೇಷ ಕಾರ್ಯಕ್ರಮ ಹಾಕಿಕೊಂಡಿದೆ. ಇದರ ಸದ್ಬಳಕೆಯನ್ನು ಮಾಡಿಕೊಳ್ಳಬೇಕು ಎಂದು ಡಾ.ನಾಗರಾಜ ಹೇಳಿದರು.

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯಪುರ, ಪ್ರತಿಬಂಧಕ ಘಟಕ, ತಾಲೂಕ ಆರೋಗ್ಯ ಅಧಿಕಾ–ರಿಗಳ ಕಾರ್ಯಾಲಯ, ತಾಲೂಕ ಸಾರ್ವಜನಿಕ ಆಸ್ಪತ್ರೆಯ ಐಸಿಟಿಸಿ/ಎಆರ್‌ಟಿ ಕೇಂದ್ರಗಳ ಸಂಂ–ಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಗರ್ಭಿಣಿ ಮಹಿಳೆಯರ ಸೀಮಂತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಅವರು, ಮಹಿಳೆಯರು ತರಕಾರಿ, ಹಣ್ಣು ಸೇರಿದಂತೆ ಪೌಷ್ಠಿಕ ಆಹಾರ ಸೇವನೆ ಮಾಡಬೇಕು. ಒಂದು ವೇಳೆ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಗಮನ ಹರಿಸದೇ ಹೋದರೆ ಅನೇಕ ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಹಾಗಾಗಿ ಆರೋಗ್ಯವಾಗಿರಲು ಪೌಷ್ಟಿಕಾಂಶದ ಆಹಾರವನ್ನು ಮನೆಯಲ್ಲಿಯೇ ತಯಾರಿಸಿ ಸೇವನೆ ಮಾಡಬೇಕು. ಮತ್ತು ಆರೋಗ್ಯ ತಪಾಸಣೆ ಮಾಡಿಸಿ ವೈದ್ಯರಿಂದ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಐಸಿಟಿಸಿ ಘಟಕದ ಆಪ್ತಸಮಾಲೋಚಕ ಎಂ.ಪಿ ಸಾಗರ ಮಾತನಾಡಿ, ಆರೋಗ್ಯವಂತ ಮಕ್ಕಳಿಂದ ದೇಶ ಸದೃಢವಾಗುತ್ತದೆ. ಗರ್ಭಿಣಿ ತಾಯಂದಿರಿಗೆ ಸೀಮಂತ ಕಾರ್ಯಕ್ರಮವನ್ನು ಮಾಡುವುದರ ಜೊತೆಗೆ ತಾಯಿ ಮಗುವಿನ ಆರೋಗ್ಯದ ಕಡೆ ಗಮನ ಹರಿಸಬೇಕು. ಮತ್ತು ಸಾಂಕ್ರಮಿಕ ಕಾಯಿಲೆಗಳ ಬಗ್ಗೆ ತಾಯಿಯು ಮುನ್ನೆಚ್ಚ–ರಿಕೆಯ ಕ್ರಮಗಳನ್ನು ವಹಿಸಬೇಕು. ಹೆಚ್‌ಐವಿ ಮತ್ತು ಟಿಬಿ ಕಾಯಿಲೆಗಳು ತಾಯಿಯಿಂದ ಮಗುವಿಗೆ ಬರುವಂತಹ ಸಾಧ್ಯತೆಗಳಿರುತ್ತವೆ. ಸೀಮಂತ ಕಾರ್ಯಕ್ರಮ ಮಾಡುವುದರ ಜೊತೆಗೆ ಆರೋಗ್ಯ ತಪಾಷಣೆಯಯನ್ನು ನೀಡಬೇಕು ಎಂದರು.

ಈ ವೇಳೆ ಡಾ.ಹರಿಕೃಷ್ಣ, ಲವ ಗಾಣಿಗೇರ, ವಿರೇಂದ್ರ ಪವಾಡೆ, ರಾಜು ನರಗೋದಿ, ರಾಯಣ್ಣ ಸನ್ನೋಳ್ಳಿ, ದೇವಮ್ಮ, ಸಿದ್ದರಾಮ ಮುಗದಿ, ಚಿದಾನಂದ, ಜ್ಯೋತಿ ಪಾಟೀಲ, ರಾಜೇಶ್ವರಿ, ಸವಿತಾ ಹಿರೇಪಟ, ಗೀತಾ, ಸುರೇಶಗೌಡ, ಮಹಮ್ಮದಸೊಹೆಬ್ ಸೇರಿದಂತೆ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಸಿಬ್ಬಂದಿಗಳು ಮತ್ತು ಗರ್ಭಿಣಿ ಮಹಿಳೆಯರು ಇದ್ದರು.

# ಫಲ–ಪುಷ್ಪ ಪ್ರದರ್ಶನ & ಮಾರಾಟಕ್ಕೆ ನೋಂದಣಿಗೆ ಅವಕಾಶ

**ಉದಯರಶ್ಮಿ ನ್ಯೂಸ್**

ವಿಜಯಪುರ: ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯತ, ವಿಜಯಪುರ ಜಿಲ್ಲಾ ತೋಟಗಾ–ರಿಕಾ ಸಂಘ (ರಿ), ಕನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ, ಇಂಡಿ ಹಾಗೂ ಹಾಪ್‌ಕಾಮ್ಸ್ ಇವರ ಸಹಯೋಗದೊಂದಿಗೆ ತೋಟಗಾ–ರಿಕೆ ಕಚೇರಿ ಆವರಣದ ಬಸವ ವನದಲ್ಲಿ ಜ.13ರಿಂದ 15ರವರೆಗೆ 2023–24ನೇ ಸಾಲಿನ ಫಲ–ಪುಷ್ಪ ಪ್ರದರ್ಶನ, ಹಣ್ಣುಗಳ ಮೇಳ ಹಾಗೂ ತೋಟಗಾರಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ರೈತರು ಬೆಳೆದಿರುವ ವಿವಿಧ ಹಾಗೂ ಅತ್ಯುತ್ತಮ ತೋಟಗಾರಿಕೆ ಬೆಳೆಗಳ ಪ್ರದರ್ಶನ, ಇಲಾಖೆ ಯೋಜನೆಗಳ ಬಗ್ಗೆ ರೈತರಿಗೆ ಮಾಹಿತಿಯೊಂದಿಗೆ ಹೂ– ಹಣ್ಣು ತರಕಾರಿಗಳಲ್ಲಿ ವಿವಿಧ ಕಲಾಕೃತಿಗಳ ಪ್ರದರ್ಶನ ಆಯೋಜಿಸಲಾಗಿದೆ. ತೋಟಗಾ–ರಿಕೆಯಲ್ಲಿ ಯಂತ್ರೋಪಕರಣಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ.

ಜಿಲ್ಲೆಯ ನಾಗರಿಕರು ತಮ್ಮ ಮನೆಯಂಗಳದಲ್ಲಿ ಅಭಿವೃದ್ಧಿಪಡಿಸಿದ ಬೋನ್ಸಾಯಿ ಪ್ರದರ್ಶನಕ್ಕೆ ಹೆಸರು ನೋಂದಾಯಿಸಬಹುದು, ತಾರಸಿ, ಕೈ ತೋಟ ಹಾಗೂ ಕುಂಡಗಳನ್ನು ಅಭಿವೃದ್ಧಿ ಪಡಿಸಿದ ಆಸಕ್ತ–ರಿಗೆ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಲಾಗುವುದು. ಆಸಕ್ತರು, ಭಾವಚಿತ್ರ ಸಹಿತ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯ ತೋಟಗಾ–ರಿಕಾ ನಿರ್ದೇಶಕ ಸಚಿನ ಉಟಗಿ (ಮೊ.7795952653), ಸಹಾಯ ತೋಟಗಾರಿಕಾ ನಿರ್ದೇಶಕ ಆನಂದ ಬಿರಾದಾರ (ಮೊ.9611071071) ಇವರನ್ನು ಸಂಪರ್ಕಿಸಬಹುದು ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದ್ದು, ಜಿಲ್ಲೆಯ ರೈತರು, ಸಾರ್ವಜನಿಕರು ಶಾಲಾ ಕಾಳೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಫಲ–ಪುಷ್ಪ ಪ್ರದರ್ಶಣ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ತೋಟಗಾರಿಕಾ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನರಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: 2023–24ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಟಾಕಿಂಗ್ ಲ್ಯಾಪ್ಟಾಫ್ ಯೋಜನೆ, ಸಾಧನೆ ಸಲಕರಣೆಗಳ, ಶ್ರವಣದೋಷವುಳ್ಳವರಿಗೆ ಹೊಲಿಗೆ ಯಂತ್ರ, ದೃಷ್ಟಿದೋಷ ಹೊಂದಿರುವ ವಿಕಲಚೇನರಿಗೆ ಬ್ರೈಲ್ ಕಿಟ್ ಗಳಿಗಾಗಿ ಸುವಿಧಾ ವೆಬ್ ಸೈಟ್ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯನ್ನು ಡಿ.ಬಿ.ಟಿ ಒಳಪಡಿಸಿ, ಅರ್ಹ ವಿಕಲಚೇತನರು ಆನ್‌ಲೈನ್ ಮೂಲಕ ಹಾಗೂ ಭೌತಿಕವಾಗಿ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು 30–01–2024 ಕಡೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಜಯಪುರ – ರವಿ ರಾಠೋಡ ( ಮೊ.90035553337), ಇಂಡಿ – ಪರಶುರಾಮ ಭೋಸಲೆ (ಮೊ.9972441464), ಸಿಂದಗಿ – ಮುತ್ತುರಾಜ ಸಾತಿಹಾಳ (ಮೊ.9980019635), ಬಸವನ ಬಾಗೇವಾಡಿ – ಎಸ್. ಡಿ ಬಿರಾದಾರ (ಮೊ.8722135660) ಹಾಗೂ ಮುದ್ದೇಬಿಹಾಳ – ಎಸ್.ಕೆ. ಘಾಟಿ (ಮೊ.9740682979) ಕಚೇರಿ ದೂರವಾಣಿ ಸಂಖ್ಯೆ08352–796060ಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾ–ರಿಗಳಾದ ರಾಜಶೇಖರ ದೈವಾಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರ ಸ್ವಾವಲಂಬಿ ಬದುಕಿಗೆ ಧರ್ಮಸ್ಥಳ ಸಂಘ ಸಹಕಾರಿ

**ಉದಯರಶ್ಮಿ ದಿನಪತ್ರಿಕೆ**ಸಿಂದಗಿ: ಮಹಿಳೆಯರು ಬದುಕು ಸ್ವಾವಲಂಬನೆಯಾಗಿರಬೇಕು ಎಂದು ಧರ್ಮಸ್ಥಳ ಸಂಘವು ಮಹಿಳೆಯ–ರಿಗೆ ಉತ್ತೇಜನ ನೀಡುತ್ತಿದೆ ಎಂದು ಲೋಯಲ್ ಕೈಗಾರಿಕಾ ತರಬೇತಿ ಸಂಸ್ಥೆಯ ಉಪನ್ಯಾಸಕ ದ್ಯಾಮಣ್ಣ ಹೇಳಿದರು.



ಪಟ್ಟಣದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನಾ ಕಛೇರಿಯ ವತಿಯಿಂದ ಸ್ವ–ಸಹಾಯ ಸಂಘಗಳಿಗೆ ಸ್ವ–ಉದ್ಯೋಗ ಅಧ್ಯಯನ ಪ್ರವಾಸ ಕೈಗೊಂಡು ವಿಜಯಪುರ ನಗರದ ಲೋಯಲ್ ಕೈಗಾರಿಕಾ ತರಬೇತಿ ಸಂಸ್ಥೆಗೆ ಬೇಟಿ ನೀಡದ ಸಂದರ್ಭದಲ್ಲಿ ಅಲ್ಲಿನ ಉಪನ್ಯಾಸಕ ದ್ಯಾಮಣ್ಣ ಮಾಹಿತಿ ನೀಡಿದರು.

ಗೃಹ ಬಳಕೆಯ ಸ್ವ ಉದ್ಯೋಗಗಳಾದ ರೊಟ್ಟಿ ತಯಾರಿಕೆ, ಹಗ್ಗ ತಯಾರಿಕೆ, ಹಾಲು ಕರೆಯುವ ಮಿಲ್ಕಿಂಗ್ ಯಂತ್ರ, ಕುಂಬಾರಿಕೆ ಸೇ–ರಿದಂತೆ ವಿವಿಧ ಸ್ವ–ಉದ್ಯೋಗಗಳ ಕುರಿತಾಗಿ ಮಾಹಿತಿ ನೀಡದರು.

ತದನಂತರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ರುಡ್‌ಸೆಟ್ ಸಂಸ್ಥೆಗೆ ಬೇಟಿ ನೀಡಿ ಜಗದೀಶ ಅವರಿಂದ ಟೈಲರಿಂಗ್ ಮತ್ತು ಕೃಷಿಯೇತರ ಮತ್ತು ಕೃಷಿಗೆ ಪೂರಕವಾದಂತ ಹಲವಾರು ಸ್ವ ಉದ್ಯೋಗಗಳ ಕುರಿತು ಮಾಹಿತಿ ಪಡೆದುಕೊಂಡರು. ಆರ್ಥಿಕವಾಗಿ ಅಭಿವೃದ್ಧಿಯಾಗುವಲ್ಲಿ ಹೆಣ್ಣು ಮಕ್ಕಳ ಪಾತ್ರದ ಬಹಲ ಮುಖ್ಯ. ಮಹಿಳೆಯರು ಸೌ–ಉದ್ಯೋಗಿಗಳಾಗುವ ಮೂಲಕ ಸ್ವಾವಲಂಬನೆಯ ಬದುಕು ಸಾಗಿಸಿರಿ ಎಂದರು.

ಈ ವೇಳೆ ಕೃಷಿ ಮೇಲ್ವಿಚಾರಕ ಸುರೇಶ, ವೆಂಕಟೇಶ, ಸೇವಾ ಪ್ರತಿನಿಧಿ ಪರ್ವಿನ ಸೇರಿದಂತೆ ಸ್ವ–ಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು.

# ಮಕ್ಕಳ ರಕ್ಷಣಾ ವ್ಯವಸ್ಥೆ ಕುರಿತು ಭಾಗಿದಾರರೊಂದಿಗೆ ಸಭೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂದು ನರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಮಕ್ಕಳ ರಕ್ಷಣಾ ವ್ಯವಸ್ಥೆಯ ಕುರಿತು ಭಾಗಿದಾರೊಂದಿಗೆ ಪ್ರಗತಿ ಪರಿಶೀಲನೆ ಅಧ್ಯಕ್ಷತೆ ವಹಿಸಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ ಕೋಸಂಬೆ ಮಾತನಾಡಿ, ಅಪ್ರಾಪ್ತರು ಗರ್ಭಿಣಿ ಕುರಿತು ಪೋಕ್ಸೋ ಅದೇಶದಂತೆ ಪೋಲಿಸರ ಗಮನಕ್ಕೆ ತಂದು ಪ್ರಕರಣ ದಾಖಲಿಸಿಕೊಳ್ಳುವತ್ತ ಆರೋಗ್ಯ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಸಶಕ್ತ ಸದೃಢ ಉತ್ತಮ ಸಮಾಜದ ಬೆಳವಣಿಗೆ ಗರ್ಭಿಣಿಯರ ಹಾಗೂ ತಾಯಂದಿರುಗಳು ಮಗುವಿನ ಉತ್ತಮ ಬೆಳೆವಣಿಗೆಗಾಗಿ ಆರೋಗ್ಯ ಕಡೆ ಹೆಚ್ಚು ನಿಗಾ ವಹಿಸಬೇಕು. ಸಮತೋಲನ ಹಾಗೂ ಪೌಷ್ಟಿಕ ಆಹಾರ ಅತ್ಯವಶ್ಯವಾಗಿದ್ದು ತಪ್ಪದೆ ಉತ್ತಮ ಶಕ್ತಿಭರಿತ ಆಹಾರ ಒದಗಿಸಬೇಕು ಎಂದು ಅವರು ಹೇಳಿದರು.

ರಕ್ತ ಹೀನತೆ ಮಕ್ಕಳಿಗಾಗಿ ಅನಿಯಾ ಮುಕ್ತ ಕರ್ನಾಟಕ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಪ್ರಥಮ ಹಂತದಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ನಂತರ ಹೈಸ್ಕೂಲ ಹಾಗೂ ಪ್ರಾಥ–ಮಿಕ ಹಂತಗಳಲ್ಲಿ ಮಕ್ಕಳಿಗೆ ಆರೋಗ್ಯ ತಪಾಸಣೆ ಮಾಡಿ ಅವರಿಗೆ ಅಲ್ಲಿಯೆ ಮಕ್ಕಳಿಗೆ ಅಗತ್ಯಕ್ಕನುಗುಣವಾಗಿ ಔಷಧಿಗಳನ್ನು ವಿತರಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 162 ಸ್ಕ್ಯಾನಿಂಗ ಸೆಂಟರ್‌ಗಳಲ್ಲಿ ಮಶಿನ್‌ಗಳು ಕಾರ್ಯನಿರ್ವಹಿಸುತ್ತಿದ್ದು ಪ್ರತಿ ತಿಂಗಳು ಸಮಿತಿಯವ್ರು 50ರಿಂದ 52 ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದ್ದು, ಆ ಪೈಕಿ 34 ಸೆಂಟರ್‌ಗಳಿಗೆ ನೋಟಿಸನ್ನು ನೀಡಲಾಗಿದೆ. ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸಭೆಗೆ ತಿಳಿಸಿದರು.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ಕಾವಲು ಪಡೆ, ಗ್ರಾಮ ಸಭೆ ಆಯೋಜಿಸುವಂತೆ ಸೂಚಿಸಿದ ಅವರು ಗ್ರಾಮ ಪಂಚಾಯತಿ ಮಟ್ಟದಲ್ಲಿ ಕ್ರಮ ಕೈಗೊಳ್ಳಬೇಕು ಎಂದು ತಾಲೂಕು ಕಾರ್ಯನಿರ್ವಾಹಣಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾಯಮೂರ್ತಿ ಸಂತೋಷ ಕುಂದರ ಮಾತನಾಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಮಕ್ಕಳ ಕಲ್ಯಾಣ ಸಮೀತಿ ಅಧ್ಯಕ್ಷರಾದ ಶ್ರೀಧರ ಕುಲಕರ್ಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ ಚವ್ಹಾಣ, ತಾಲೂಕು ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಬಸವರಾಜ ಜೋಗಳೂರ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಾತ್ರೆ ವ್ಯವಸ್ಥೆ ಪರಿಶೀಲಿಸಿದ ಡಿಸಿ ಟಿ.ಭೂಬಾಲನ್



**ಉದಯರಶ್ಮಿ ನ್ಯೂಸ್**

ವಿಜಯಪುರ: ಜಾನುವಾರ ಜಾತ್ರೆಯ ಹಿನ್ನೆಲೆಯಲ್ಲಿ ನಗರದ ತೊರವಿಗೆ ಮಂಗಳವಾರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಭೇಟಿ ನೀಡಿ ನೀಡಿ ಸ್ಥಳ ಪರಿಶೀಲನೆ ಮಾಡಿದರು.

ಮೂರು ವರ್ಷಗಳ ನಂತರ ಜಾನುವಾರಗಳ ಜಾತ್ರೆ ನಡೆಯುತ್ತಿರುವುದರಿಂದ ಸುಮಾರು 20–25 ಎಕರೆಯಲ್ಲಿ ಬಹಳ ವಿಜೃಂಭಣೆಯಿಂದ ಜಾತ್ರೆ ಆಯೋಜಿಸಲಾಗುತ್ತಿದ್ದು, ಈ ಬಗ್ಗೆ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ಮಾಡಿದರು.

ಜಾನುವಾರ ಜಾತ್ರೆಯ ಸಂದರ್ಭ ಯಾವುದೇ ಸಮಸ್ಯೆಯುಂಟಾಗದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಸೂಚಿಸಿದರು.

ಜಾತ್ರೆಗೆ ಬರಲು ಅನುಕೂಲವಾಗುವ ನಿಟ್ಟಿನಲ್ಲಿ ಸುಗಮ ರಸ್ತೆ ಹಾಗೂ ಬಸ್‌ಗಳ ವ್ಯವಸ್ಥೆ, ಜಾನುವಾರಗಳಿಗೆ ಕುಡಿಯುವ ನೀರು ಒದಗಿಸುವುದು, ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಪಶುವೈದ್ಯರು ಮುಂಜಾಗ್ರತಾ ಕ್ರಮವಾಗಿ ಜಾತ್ರೆಯ ಸಂದರ್ಭದಲ್ಲಿ ಆಂಬ್ಯಲೆನ್ಸ್ ವೈದ್ಯಕೀಯ ಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು. ಯಾವುದೇ ಕೊರತೆ ಉಂಟಾಗದಂತೆ ಅಚ್ಚುಕಟ್ಟಾಗಿ ಜಾನುವಾರ ಜಾತ್ರೆ ವ್ಯವಸ್ಥಿತವಾಗಿ ಆಯೋಜನೆಗೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭ ವಿಜಯಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ್ ಶಿಂಧೆ, ವಿಜಯಪುರ ಉಪವಿಭಾಗಾಧಿಕಾರಿ ಬಸವಣೆಪ್ಪ ಕಲಶೆಟ್ಟಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಶೈಲಜಾ. ಎಂ.ವಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಜೀವಿನಿ ಯುವಕ ಸಂಘದಿಂದ ಪ್ರಸಾದ ಸೇವೆ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪಟ್ಟಣದ ಹಳೆಯ ತರಕಾರಿ ಮಾರುಕಟ್ಟೆಯಲ್ಲಿರುವ ಖಾಸ್ಗತೇಶ್ವರ ಮಠದಲ್ಲಿ ಸಂಜೀವಿನಿ ಯುವಕ ಸಂಘದ ವತಿಯಿಂದ ಪ್ರಸಾದ ಸೇವೆ ಕಲ್ಪಿಸಲಾಗಿತ್ತು.

ಈ ವೇಳೆ ಸಂಘದ ಪ್ರಮುಖರಾದ ರಾಜೇಂದ್ರಗೌಡ ರಾಯಗೊಂಡ, ಪಿಡಿಓ ಮುತ್ತು ಗಣಾಚಾರಿ, ಶರಣು ಪಡದಾಳಿ, ಹರೀಶ ಬೆವೂರ ಮತ್ತೀತರರು ಮಾತನಾಡಿ, ಕಳೆದ ಮೂವತ್ತು ವರ್ಷದಿಂದ ಮಂತ್ರಾಲಯಕ್ಕೆ ತೆರಳುವ ಪಾದಯಾತ್ರಿಗಳಿಗೆ ಕುಶಲೋಪರಿ ವಿಚಾರಿಸಿ ರಾತ್ರಿಯ ಊಟ ಹಾಗೂ ಬೆಳಿಗ್ಗೆ ಉಪಹಾರ ಸೇವೆ ಕಲ್ಪಿಸುವ ಸೇವಾ ಕಾರ್ಯವನ್ನು ಸಂಜೀವಿನಿ ಯುವಕ ಸಂಘ ಮಾಡುತ್ತ ಬಂದಿದೆ. ನಮ್ಮೆಲ್ಲರ ಸ್ನೇಹಿತ ದಿ.ಶರಣು ಬೂದಿಹಾಳಮಠ ಅವರ ಮಾರ್ಗದರ್ಶನದಂತೆ ಈ ಸೇವೆಯಲ್ಲಿ ಪ್ರತಿಯೊಬ್ಬರೂ ಕಾಯಾ ವಾಚಾ ಮನಸಾ ತೊಡಗಿಕೊಳ್ಳುತ್ತೇವೆ ಎಂದರು.

ಸೇವೆಯಲ್ಲಿ ರಮೇಶ ಕೆಂಧೂಳಿ, ಶಿವು ಬಿಜಾಪೂರ, ಅಶೋಕ ವನಹಳ್ಳಿ, ಶೇಖರ ಪತ್ತಾರ, ಮಹಾಂತೇಶ ಮಡಿವಾಳರ, ಸಂತು ಬಾವೂರ, ರಾಜು ಬಳ್ಳೊಳ್ಳಿ, ರಾಜು ಹೊಳಿ, ಮಹಾಂತೇಶ ಬೂದಿಹಾಳಮಠ ಸೇ–ರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಮಕ್ಕಳ ಹಕ್ಕುಗಳ ಪಾಲನೆಯಾಗುತ್ತಿಲ್ಲ :ಕೊರವಾರ




**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಜಿಲ್ಲೆಯಲ್ಲಿ ಮಕ್ಕಳ ಮೇಲೆ ನಿರಂತರ ಶೋಷಣೆಯಾಗುತ್ತಿದ್ದು, ಮಕ್ಕಳ ಹಕ್ಕುಗಳ ಪಾಲನೆಯಾಗುತ್ತಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಾಯಕ ಶಿಶು ಅಭಿವೃದ್ಧಿಅಧಿಕಾರಿ ಎಸ.ಎ.ಕೊರವಾರ ಹೇಳಿದರು.

ತಾಲ್ಲೂಕಿನ ಇಬ್ರಾಹಿಂಪೂರ ಗ್ರಾಮದ ಪ್ರಾಥಮಿಕ ಶಾಲೆಯ ಆವರಣದಲ್ಲಿ ಶನಿವಾರ ಉಜ್ವಲ ಗ್ರಾಮೀಣ ಅಭಿವೃದ್ಧಿ ಸೇವಾಸಂಸ್ಥೆ, ಇಂಡಿಯಾ ಲಿಟ್ರಸಿ ಪ್ರೋಜೆಕ್ಟ್ "ಶಿಕ್ಷಣ ಯಾತ್ರೆ" ಯೋಜನೆ ಹಾಗೂ ಜಿಲ್ಲಾ ಆಡಳಿತ ಸಹಯೋಗದಲ್ಲಿ ಜರುಗಿದ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಮಕ್ಕಳ ರಕ್ಷಣೆಗಾಗಿ ಇರುವ ನಂಬರ 100, 112, 1098, ಸಹಾಯವಾಣಿ ಹಾಗೂ ತಮ್ಮ ಇಲಾಖೆಯ ಸೇವೆಗಳ ಬಗ್ಗೆ ಮಾಹಿತಿ ನೀಡಿದರು.

ಕೋರವಾರ ವೈದ್ಯಾಧಿಕಾರಿ ಸಿದ್ದಪ್ಪ ಚೀರಣಕಲ್ಲ, ಸಿಆರ್‌ಪಿ ಕೆ.ಎಸ. ವಾಲಿಕಾರ, ನಿಲಯಪಾಲಕಿ ಎನ್. ಎಮ್ ದಫೇದಾರ, ಮುಖ್ಯಗುರು ಡಿ.ಎ.ಇನಾಮದಾರ, ಮಕ್ಕಳಿಗೆ ಇರುವ ಸೌಲಭ್ಯಗಳು ಮತ್ತು ಮಕ್ಕಳ ಕಾನೂನುಗಳ ಕುರಿತು ಮಾಹಿತಿ ನೀಡಿದರು.

ವೇದಿಕೆಯಲ್ಲಿ ಮಕ್ಕಳು ಮತ್ತು ಅಂಗನವಾಡಿ ಕಾರ್ಯಕರ್ತರು ತಮ್ಮ ಸಮಸ್ಯೆಗಳನ್ನು ಮಂಡಿಸಿ, ಕುಡಿಯುವ ನೀರು, ರಸ್ತೆ, ಕಾಲುವೆಗೆ ತಂತಿ ಬೇಲಿ, ಹಳ್ಳಕೆ ಸೇತುವೆ, ಬಸ್ಸಿನ ವೇಳೆ ಬದಲಾವಣೆ, ಅಂಗನವಾಡಿ ಹಾಗೂ ಶಾಲಾ ಕಟ್ಟಡ, ಕಿಡಕಿ, ಕಂಪೌಂಡ, ಗೇಟ್ ರಿಪೇರಿ, ಶೌಚಾಲಯಗಳು, ಕಂಪ್ಯೂಟರ್, ಗ್ರಂಥಾಲಯಗಳ ಬೇಡಿಕೆಯಿಟ್ಟರು.

ಜಾಲವಾದ ಗ್ರಾಮ ಪಂಚಾಯಿತಿ ಸಿಬ್ಬಂದಿ ಗುರು ವ್ಯಾಗೇರಿ ತಮ್ಮ ಪಂಚಾಯಿತಿ ಅಡಿಯಲ್ಲಿ ಮಕ್ಕಳ ಶಿಕ್ಷಣಕ್ಕಾಗಿ ಮಾಡಿರುವ ಕೆಲಸಗಳ ಮಾಹಿತಿ ನೀಡಿ, ಈ ವರ್ಷದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದಾಗಿ ಹೇಳಿದರು. ಉಜ್ವಲ–ಐಎಲ್‌ಪಿ ಯೋಜನೆ ಸಂಯೋಜಕ ಸಾಗರ ಘಾಟಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಲಕ್ಷ್ಮಣ ಚವ್ಹಾಣ, ಮಾಳಪ್ಪ ನಾಯ್ಕೋಡಿ ಕಾರ್ಯದರ್ಶಿ ಮೈಬೂಬ್ ನಧಾಪ, ಆರೋಗ್ಯ ಇಲಾಖೆಯ ಮಲ್ಲನಗೌಡ ಸಾಲೋಡಗಿ, ಎನ್.ವಿ.ವಿಜ್ಜಿ, ರಾಜೇಶ್ವರಿ ಕನ್ನೋಳ್ಳಿ, ಎಸ್‌ಡಿಎಮ್‌ಸಿ ಅದ್ಯಕ್ಷ ಇಸ್ಮಾಯಿಲ್ ಬಾಗವಾನ, ಐ.ಎಲ್.ಪಿ ಯೋಜನೆಯ ಶಶಿಕಾಂತ ಸುಂಗಠಾಣ ಭಾಗಣ್ಣ ಹಾಳಕಿ, ಬಾಬು ರಾಠೋಡ ಪ್ರಾಥಮಿಕ ಶಾಲೆಮುಖ್ಯಗುರುಗಳು ಭಾಗವಹಿಸಿದ್ದರು.

# ಗರ್ಭಿಣಿಯರಿಗೆ ಸಾಮೂಹಿಕ ಸೀಮಂತ ಕಾರ್ಯ




**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ತಾಲೂಕ ಆಸ್ಪತ್ರೆಯಲ್ಲಿ ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿಗಳ ಕಾರ್ಯಾಲಯ, ತಾಲೂಕು ಆಸ್ಪತ್ರೆಗಳ ಸಹಯೋಗದಲ್ಲಿ ಗರ್ಭಿಣಿಯರಿಗೆ ಸಾಮೂಹಿಕ ಸೀಮಂತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಚಿಕ್ಕ ಮಕ್ಕಳ ತಜ್ಞ ಡಾ ಪರಶುರಾಮ ವಡ್ಡರ ಮಾತನಾಡಿ, ಗರ್ಭಿಣಿ ಮಹಿಳೆಯರು ಸಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಜೊತೆಗೆ ಪೌಷ್ಟಿಕ ಆಹಾರ ಹಾಗೂ ತರಕಾರಿ ಸೊಪ್ಪುಗಳನ್ನು ದಿನನಿತ್ಯ ಹೆಚ್ಚಾಗಿ ಸೇವಿಸಬೇಕು. ಇದರಿಂದ ರಕ್ತ ಹೀನತೆಯನ್ನು ತಡೆಗಟ್ಟಬಹುದು ಮತ್ತು ಸುರಕ್ಷಿತ ಹೆರಿಗೆಗೆ ಸಹಕಾರಿ ಆಗುವುದರ ಜೊತೆಗೆ ಪ್ರತಿಯೊಬ್ಬ ಗರ್ಭಿಣಿಯರು ಎಚ್.ಐ.ವಿ ಪರೀಕ್ಷೆ ಮಾಡಿಸಿಕೊಳ್ಳಬೇಕು. ಗರ್ಭಾವಸ್ಥೆಯಲ್ಲಿ ಎಚ್.ಐ.ವಿ ಸೋಂಕು ಇರುವುದು ಪತ್ತೆಯಾದರೆ ತಾಯಿಯಿಂದ ಮಗುವಿಗೆ ಎಚ್.ಐ.ವಿ ಹರಡುವುದನ್ನು ತಡೆಯಬಹುದು ಎಂದರು.

ತಾಲೂಕ ಆಸ್ಪತ್ರೆಯ ಎ.ಆರ್.ಟಿ ಆಪ್ತ ಸಮಾಲೋಚಕಿ ವಿಜಯಲಕ್ಷ್ಮೀ ಪಾಟೀಲ ಮಾತನಾಡಿ, ಗರ್ಭಿಣಿಯರು ತಪ್ಪದೆ ಮೂರು ತಿಂಗಳು ಇರುವಾಗಲೇ ತಪ್ಪದೇ ಎಚ್.ಐ.ವಿ ಪರೀಕ್ಷೆ ಮಾಡಿಸಿಕೊಳ್ಳಬೇಕು. ಏನಾದರೂ ಸೋಂಕು ತಗುಲಿದರೆ ಮಗುವಿಗೆ ಹರಡುವುದನ್ನು ತಪ್ಪಿಸಲು ಕಡ್ಡಾಯವಾಗಿ ವೈದ್ಯರ ಸಲಹೆ ಪಡೆಯಬೇಕು. ಎಚ್.ಐ.ವಿ ಸೋಂಕಿತ ವ್ಯಕ್ತಿಯ ರಕ್ತ ಪಡೆಯುವುದರಿಂದ, ಅಸುರಕ್ಷಿತ ಲೈಂಗಿಕತೆಯಿಂದ ಎಚ್.ಐ.ವಿ ಸೋಂಕು ತಗಲುತ್ತದೆ. ಗರ್ಭಿಣಿಯಾದ ಸಂದರ್ಭದಲ್ಲಿ ಅಗತ್ಯ ಚಿಕಿತ್ಸೆ ನೀಡಿದಲ್ಲಿ ಮಗುವಿಗೆ ಹರಡದಂತೆ ತಡೆಯಬಹುದು ಎಂದರು.

ನಗರ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್ ಗೌಡರ ಮಾತನಾಡಿ, ಗ್ರಾಮೀಣ ಪ್ರದೇಶದ ಮಹಿಳೆಯರು ಜಾಗೃತರಾಗಿರುವುದರಿಂದ ಈಚೆಗೆ ಶಿಶು ಮತ್ತು ತಾಯಂದಿರ ಮರಣ ಪ್ರಮಾಣ ಕಡಿಮೆಯಾಗಿದೆ ಮಹಿಳೆಯರಲ್ಲಿ ಎಚ್‌ಐವಿ ಸೋಂಕನ್ನು ಪ್ರಾಥಮಿಕ ಹಂತದಲ್ಲೇ ತಡೆಗಟ್ಟುವಿಕೆಯು ಬಹಳ ಮುಖ್ಯ. ಸೋಂಕು ಹೇಗೆ ಹರಡುತ್ತದೆ ಎನ್ನುವ ಬಗ್ಗೆ ಅಗತ್ಯ ಮಾಹಿತಿಯನ್ನು ಪಡೆದುಕೊಳ್ಳಬೇಕು ಎಂದರು.

ಐಸಿಟಿಸಿ ಆಪ್ತ ಸಮಾಲೋಚಕ ಟಿ.ಎಸ್ ಪಾಟೀಲ ಮಾತನಾಡಿದರು.

ತಾಲೂಕ ಆಸ್ಪತ್ರೆಯ ಡಾ.ಮೊಹಮ್ಮದ್ ಆಸ್ಪಾಕ್‌ಅಹ್ಮದ ಜನರಲ್ ಸರ್ಜನ ಅಧ್ಯಕ್ಷತೆ ವಹಿಸಿದ್ದರು. ಡಾ.ಹಸನ ಬೀಳಗಿ, ಡಾ. ಆರ್.ಎಂ.ಇನಾಮದಾರ, ಹಿರಿಯ ಶುಶ್ರೂಷಣಾಧಿಕಾರಿ ಬಿ.ಎನ್.ಸಾರವಾಡ, ಎಸ್.ಬಿ.ಬೋಸ್ಲೆ, ಎಂ.ಬಿ.ಬಾಗವಾನ್, ಎನ್.ಎಸ್. ಹುಂಡೇಕರ್ಲ, ಪ್ರಯೋಗಾಲಯ ತಾಂತ್ರಿಕ ಅಧಿಕಾರಿಗಳಾದ ಎ. ಎಂ. ಹಾಲ್ಯಾಳ, ವಿ.ವಿ.ಪವಾಡಶೆಟ್ಟಿ, ಮುತ್ತು ಪಾಟೀಲ, ರಫೀಕ ಬಾಗವಾನ, ಎಂ. ಎಚ್.ಮಕಾನದಾರ, ವಿಜಯಕುಮಾರ್ ಹಳ್ಳಿ, ಚನ್ನಮ್ಮ ಛಲವಾದಿ, ಏಡ್ಸ್ ಜಾಗೃತಿ ಮಹಿಳಾ ಸಂಘದ ಶ್ರೀಮಂತ ಚೌಹಾಣ ನವಸ್ಫೂರ್ತಿ, ಸೇ–ರಿದಂತೆ ತಾಲೂಕ ಆಸ್ಪತ್ರೆ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಭಾಗಿಯಾಗಿದ್ದರು.

ಮಲ್ಲನಗೌಡ ದ್ಯಾಪುರ ನಿರ್ವಹಿಸಿದರು.

# ಶಿಶುಪಾಲನಾ ಕೇಂದ್ರದ ಸಿಬ್ಬಂದಿಗೆ ತರಬೇತಿ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಅಖಂಡ ತಾಲೂಕಿನಲ್ಲಿರುವ ಶಿಶುಪಾಲನಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಇಲಾಖೆಯ ಮಾರ್ಗಸೂಚಿ ಕಾರ್ಯನಿರ್ವಹಿಸುವ ಜೊತೆಗೆ ಮಕ್ಕಳನ್ನು ಉತ್ತಮ ರೀತಿಯಲ್ಲಿ ಆರೈಕೆ ಮಾಡಬೇಕೆಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ.ಯುವರಾಜ್ ಹನಗಂಡಿ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಗ್ರಾಮೀಣ ಶಿಶುಪಾಲನಾ ಕೇಂದ್ರಗಳ ಮಕ್ಕಳ ಆರೈಕೆದಾರರಿಗೆ ಸೋಮವಾರ ಆಯೋಜಿಸಿದ್ದ ಅಖಂಡ ತಾಲೂಕು ಮಟ್ಟದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಸವನಬಾಗೇವಾಡಿ, ನಿಡಗುಂದಿ ಮತ್ತು ಕೊಲ್ಹಾರ ತಾಲೂಕಿನ 27 ಆಯ್ದ ಗ್ರಾಮ ಪಂಚಾಯತಿಗಳಲ್ಲಿ ಶಿಶು ಪಾಲನಾ ಕೇಂದ್ರಗಳನ್ನು ತೆರೆಯಲಾಗುತ್ತಿದ್ದು. ಮಕ್ಕಳ ಆರೈಕೆದಾರರ ತರಬೇತಿ ಪಡೆದು ಜಾಗರೂಕತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.


ತರಬೇತಿ ಪಡೆದ ತಾವೆಲ್ಲರೂ ಇಲಾಖೆ ಮಾರ್ಗಸೂಚಿಂ–ತಂತೆ ಕಾರ್ಯನಿರ್ವಹಿಸಬೇಕು. ಶಿಶುಗಳನ್ನು ಉತ್ತಮ ರೀತಿಯಲ್ಲಿ ಆರೈಕೆ ಮಾಡಬೇಕು. ಮಕ್ಕಳ ಆಹಾರ, ಸ್ವಚ್ಛತೆ ಮತ್ತು ಆರೋಗ್ಯಕ್ಕೆ ಪ್ರಥಮ ಆದ್ಯತೆ ನೀಡಿ ಅಖಂಡ ತಾಲೂಕಿನ ಕೂಸಿನ ಮನೆಗಳು ರಾಜ್ಯದಲ್ಲಿಯೇ ಮಾದರಿಯಾಗುವಂತೆ ಶ್ರಮಿಸಬೇಕೆಂದು ಕರೆ ನೀಡಿದರು.

ತಾ.ಪಂ.ಸಹಾಯಕ ನಿರ್ದೇಶಕ (ಮನರೇಗಾ) ಪ್ರಕಾಶ್ ದೇಸಾಯಿ ಅವರು ಮಾತನಾಡಿದರು.

ಕೊಲ್ಹಾರ ತಾಪಂ ಐಇಸಿ ಸಂಂ–ಯೋಜಕ ಸಂತೋಷ ಹರಿಜನ ಅವರು ಮಾಸ್ಟರ್ ಟ್ರೈನರ್ ಆಗಿ ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ನಿಡಗುಂದಿ ತಾಪಂ ಐಇಸಿ ಸಂಯೋಜಕ ದಸ್ತಗೀರ್ ಗುಡಿಹಾಳ, ಬಸವನಬಾಗೇವಾಡಿ ಐಇಸಿ ಸಂಯೋಜಕ ಮಡಿವಾಳಪ್ಪ ಬಿರಾದಾರ ಹಾಗೂ 82 ಜನ ಮಹಿಳಾ ಆರೈಕೆದಾರರ ಉಪಸ್ಥಿತರಿದ್ದರು.

# ವೈದ್ಯಾಧಿಕಾರಿ ಡಾ.ಹೂವಿನಳ್ಳಿ ಅಮಾನತಿಗೆ ಆಗ್ರಹ



**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ ಗೋಲಗೇರಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ವಿವೇಕಾನಂದ ಹೂವಿನಳ್ಳಿ ಸಕಾ9ರದ ನಿಯಮ ಗಾಳಿಗೆ ತೂರಿ ಮೇಲಾಧಿಕಾರಿಗಳ ಭಯವಿಲ್ಲದೆ, ಕತ9ವ್ಯಕ್ಕೆ ಹಾಜರಾಗದೆ ಸಂಬಳ ಪಡಿಯುತ್ತಿದ್ದಾರೆ. ಕೂಡಲೇ ಇವರನ್ನು ಕತ9ವ್ಯದಿಂದ ಅಮಾನತು ಮಾಡಿಸುವಂತೆ ಒತ್ತಾಯಿಸಿ ಶನಿವಾರ ಪ್ರಗತಿಪರ ಸಂಘಟನೆ ಪ್ರಮುಖರು ಹಾಗೂ ಗ್ರಾಮಸ್ಥರು ಗ್ರಾಪಂ ಅಧ್ಯಕ್ಷೆ ರಜಿಯಾಬೇಗಂ ಕೋರವಾರ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ದಲಿತ ಮುಖಂಡ ಶ್ರೀಶೈಲ್ ಜಾಲವಾದಿ, ಮುಖಂಡ ಮೊದಿನ್ ಶಾಬಾದಿ, ಪಿಕೆಪಿಎಸ್ ಬ್ಯಾಂಕ್ ಮಾಜಿ ನಿದೇ9ಶಕ ಬಸನಗೌಡ ಪಾಟೀಲ ಮಾತನಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವ್ಯವಸ್ಥೆ ಸಂಪೂಣ9 ಹದಗೆಟ್ಟು ಹೊಗಿದ್ದು, ಮುಖ್ಯ ವೈದ್ಯಾಧಿಕಾರಿ ಡಾ.ಹೂವಿನಳ್ಳಿ ಕತ9ವ್ಯಕ್ಕೆ ಹಾಜರಾಗದ ಹಿನ್ನೆಲೆ ಇನ್ನುಳಿದ ಸಿಬ್ಬಂದಿ ಕೂಡಾ ಮನಸ್ಸಿಗೆ ಬಂದಂತೆ ವತಿ9ಸುತ್ತಾ ಮಧ್ಯಾಹ್ನವೇ ಆಸ್ಪತ್ರೆಗೆ ಬೀಗ ಜಡಿದು ತಮ್ಮ ಖಾಸಗಿ ಕೆಲಸಗಳಿಗೆ ಹೋಗುತ್ತಿದ್ದಾರೆ. ಆಸ್ಪತ್ರೆಯಲ್ಲಿ ರೋಗಿಗಳಿಗೆ ಚಿಕಿತ್ಸೆ ಸಿಗುತ್ತಿಲ್ಲ ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಪಂದಿಸಿ ಆಸ್ಪತ್ರೆಯ ವ್ಯವಸ್ಥೆಯನ್ನು ಸರಿಪಡಿಸಬೇಕು. ಡಾ.ಹೂವಿನಳ್ಳಿ ಅವರನ್ನು ಕತ9ವ್ಯದಿಂದ ವಜಾಗೊಳಿಸಿ ಬೇರೆ ವೈದ್ಯರನ್ನು ನೇಮಕ ಮಾಡಬೇಕು. ಇಲ್ಲದಿದ್ದರೆ ಗ್ರಾಪಂ ಕಛೇರಿ ಮುಂದೆ ಹೋರಾಟ ಮಾಡಲಾಗುವದು ಎಂದು ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ವೇಳೆ ಸೈಪುನಸಾಬ ಕೋರವಾರ, ಬಾಗು ಕೋಟೆಗೋಳ, ಗೋಲ್ಲಾಳಪ್ಪ ನಾಯ್ಕೋಡಿ, ರವಿ ಯಡ್ರಾಮಿ, ಮರಗು ಕುದರಗೊಂಡ, ಮಹಾದೇವ ಭಜಂತ್ರಿ, ಮಾಂತೇಶ ಗೊಂದಳಿ, ನಿಂಗಣ್ಣ ಚಲವಾದಿ, ಸಿದ್ದು ಭಜಂತ್ರಿ, ಶಿವು ಚಿಕ್ಕಸಿಂದಗಿ, ಶಾಹಿದ್ ಕೆರುಟಗಿ ಸೇರಿದಂತೆ ಮತ್ತಿತ್ತರಿದ್ದರು.

# ಗ್ರಾಹಕರ ಹಕ್ಕುಗಳ ಬಗ್ಗೆ ಜಾಗೃತಿ ಅಗತ್ಯ :ನ್ಯಾ.ಕುಂದರ್

ಉದಯರಶ್ಮಿ ನ್ಯೂಸ್




ವಿಜಯಪುರ: ಗ್ರಾಹಕರು ತಮ್ಮ ಹಕ್ಕಿನ ಬಗ್ಗೆ ಅರಿವು ಹೊಂದಬೇಕು. ಇದಕ್ಕೆ ಸಂಬಂಧಿಸಿದ ಇಲಾಖೆಗಳು ಗ್ರಾಹಕರ ಹಕ್ಕುಗಳು ಮತ್ತು ಕಾನೂನುಗಳ ಅರಿವು ಮೂಡಿಸಬೇಕು ಎಂದು ವಿಜಯಪುರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಸ್ ಕುಂದರ್ ಅವರು ಹೇಳಿದರು.

ಅವರು ನಗರದ ನವಭಾಗದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ಸಭಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಆಹಾರ ಸುರಕ್ಷತಾ ಇಲಾಖೆ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ನ್ಯೂ ಸಂಸ್ಥೆ ವಿಜಯಪುರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ –2023ರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರೂ ಗ್ರಾಹಕ ಕಾನೂನು ಸೇವೆಗಳ ಅರಿವು ಹೊಂದಿರಬೇಕು. ಇಲಾಖೆಗಳು ಗ್ರಾಹಕರಿಗೆ ಕಾನೂನಿನ ಅರಿವು ಮೂಡಿಸಬೇಕು. ಖರೀದಿಸುವ ವಸ್ತುಗಳ ಬಗ್ಗೆ ತಿಳುವಳಿಕೆ ಹೊಂದಿರಬೇಕು. ತಾವು ಕೊಂಡುಕೊಳ್ಳುವ ವಸ್ತುವಿನ ಮೇಲೆ ಮುದ್ರಿಸಿದ ಅಂಶಗಳನ್ನು ಗಮನಿಸಬೇಕು. ಗ್ರಾಹಕರು ತಾವು ಖರೀದಿಸುವ ವಸ್ತುಗಳಿಗೆ ರಸೀದಿ ಪಡೆದುಕೊಳ್ಳಬೇಕು ಎಂದು ಹೇಳಿದರು.

ಅತಿಥಿ ಉಪನ್ಯಾಸಕರಾಗಿ ಆಗಮಿಸಿದ ವಿಜಯಪುರ ಬಳಕೆದಾರರ ಸಂಘದ ಅಧ್ಯಕ್ಷ ಹಾಗೂ ನ್ಯಾಯವಾದಿ ಎಂ.ಜಿ. ಮಠಪತಿ ಇ–ಕಾಮರ್ಸ ಮತ್ತು ಡಿಜಿಟಲ್ ಯುಗದಲ್ಲಿ ಗ್ರಾಹಕರ ರಕ್ಷಣೆ ವಿಷಯದ ಬಗ್ಗೆ ಉಪನ್ಯಾಸ ನೀಡಿ, ಡಿಜಿಟಲ್ ಹೆಸರಿನಲ್ಲಿ ಹಲವರು ಮೋಸಕ್ಕೊಳಗಾಗುತ್ತಿರುವುದು. ಆನ ಲೈನ್ ವಂಚನೆ ಬಗ್ಗೆ ಜಾಗೃತರಾಗಿರಬೇಕು.

ಜಿಲ್ಲಾ ಗ್ರಾಹಕ ದೂರು ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ವಿದ್ಯಾ ಗಲಗಲಿ,ವಿಜಯಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಎ. ಆಯ್. ವಿಜಯಪುರ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀಕಾಂತ ಬುರಣಪೂರ, ವಿಜಯಪುರ ಕೆ–ಎಫ್ ಸಿಎಸ್‌ಪಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಡಿ.ಆರ್ ನಾಯ್ಕೊಡಿ, ವಿಜಯಪುರ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ನ್ಯೂ ಸಂಸ್ಥೆಯ ಅಧ್ಯಕ್ಷರಾದ ಡಾ. ಎಸ್.ಎಂ ಕರೇಕಲ್ ಉಪಸ್ಥಿತರಿದ್ದರು.

ಪ್ರಾರ್ಥನೆ ಗೀತೆಯನ್ನು ಸೃಷ್ಟಿ ಬಿರಾದರ ಹಾಗೂ ಸುಮಾ ಬಿರಾದರ ನೇರವೇರಿಸಿದರು. ವಿಜಯಪುರ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಎಂ.ಎಸ್. ಅರಕೇರಿ ಸ್ವಾಗತಿಸಿದರು.

ಪ್ರಾತ್ಯಕ್ಷಿಕೆಗಳ ಪ್ರದರ್ಶನ: ಕಾಲೇಜಿನ ಆವರಣದಲ್ಲಿ ವಿದ್ಯಾರ್ಥಿಗಳಿಗಾಗಿ ಪ್ರಾತ್ಯಕ್ಷಿಕೆಗಳನ್ನ ಏರ್ಪಡಿಸಲಾಗಿತ್ತು. ದಿನನಿತ್ಯ ಬಳಸುವ ಆಹಾರ ಪದಾರ್ಥಗಳಲ್ಲಿ ಕಲಬೆರಕೆ ಅವುಗಳಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮಗಳ ಬಗ್ಗೆ ತಿಳಿಸಲಾಯಿತು. ಗ್ಯಾಸ್ ಸಿಲಿಂಡರ್ ಉಪಯೋಗಿಸುವ ಬಗೆ,ಅವುಗಳ ಬಿಡಿಭಾಗಗಳ ದುರಸ್ತಿ ಕುರಿತ ಮಾಹಿತಿ ನೀಡಲಾಯಿತು.


# ಕವಿಗೋಷ್ಠಿಗೆ ಹೆಸರು ನೊಂದಣಿಗೆ ಅವಕಾಶ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ತು ಸಿಂದಗಿ ಘಟಕದ ವತಿಯಿಂದ ಇದೇ ತಿಂಗಳು ಕೊನೆಯ ವಾರದಲ್ಲಿ ಹಮ್ಮಿಕೊಳ್ಳಲಾಗುತ್ತಿರುವ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕವಿಗೋಷ್ಠಿ ಹಮ್ಮಿಕೊಳ್ಳಲಾಗಿದ್ದು ಕವಿಗೋಷ್ಠಿಯಲ್ಲಿ ಭಾಗವಹಿಸಲು ಇಚ್ಛಿಸುವವರು ಜ. 15ರೊಳಗಾಗಿ ಕನ್ನಡ ಸಾಹಿತ್ಯ ಪರಿಷತ್ತು, ಸಂಘಟನಾ ಕಾರ್ಯದರ್ಶಿ ರಮೇಶ ಪೂಜಾರಿ ದೂ. 9448644228, ಗೌರವ ಕಾರ್ಯದರ್ಶಿ ಶಿವಕುಮಾರ ಕಲ್ಲೂರ 8884446648 ಇವರಲ್ಲಿ ತಮ್ಮ ಹೆಸರುಗಳನ್ನು ನೊಂದಾಯಿಸಬೇಕು. ಮತ್ತು ಬಾಗವಹಿಸುವ ಎಲ್ಲ ಕವಿಗಳಿಗೆ ಪ್ರಮಾಣ ಪತ್ರ ನೀಡಲಾಗುವುದು ಎಂದು ತಾಲೂಕು ಮಾದ್ಯಮ ಪ್ರತಿನಿಧಿ ಪಂಡಿತ ಯಂಪೂರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮದುವೆ ಬಂಧನವೋ ಅನುಬಂಧವೋ

ಪ್ರಕೃತಿಯಲ್ಲಿ ಸಂತಾನ ಮುಂದುವರಿಯಬೇಕೆಂಬುದು ಒಂದು ಬಲವಾದ ಅಪೇಕ್ಷೆ. ಚಲಿಸದ ಜೀವಿಗಳಲ್ಲಿ, ಗಾಳಿಯ ಮುಖಾಂತರವೋ ಇಲ್ಲ ,ಬೇರೆ ಜೀವಿಗಳ ಸಹಾಯದ ಮುಖಾಂತರವೋ, ಸಂತಾನ ಪ್ರಕೃತಿಯಲ್ಲಿ ಸಹಜವಾಗಿ ಮುಂದುವರೆಯುತ್ತದೆ. ಚಲಿಸುವ ಕೆಲವು ಜೀವಿಗಳಲ್ಲಿ ನಿರ್ದಿಷ್ಟ ಸಮಯದಲ್ಲಿ ಶಕ್ತಿವಂತ ಸಂತಾನ ಹೊಂದುವುದರ ಬಗ್ಗೆ ಮಾತ್ರ ಅಪೇಕ್ಷೆ. ಆದರೆ ಮಾನವ ಜೀವಿಯಲ್ಲಿ ಗಂಡು–ಹೆಣ್ಣು ಕೂಡಿ ಬಾಳಲು ,ಸ್ವಸ್ಥ ಸಮಾಜಕ್ಕಾಗಿ ಒಂದು ಚೌಕಟ್ಟು ಅನಿವಾರ್ಯ. ಆ ಚೌಕಟ್ಟೇ 'ಮದುವೆ'




## ಭಾವರಶ್ಮಿ

– ಮೈಥಿಲಿ ಗೋಪಿನಾಥ್
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ


ಎಂಬ ಶಾಸ್ತ್ರ ವಿಧಿ. ಅದು ಶಾಸ್ತ್ರ ಬದ್ಧವೋ, ಕಾನೂನು ಬದ್ಧವೋ ಆಗಿರಬಹುದು. ಸಾಮಾನ್ಯವಾಗಿ ಶಾಸ್ತ್ರ ಬದ್ಧವಾದ ಮದುವೆ ತನ್ನ ಇತಿಮಿತಿಯಲ್ಲಿ, ತಮ್ಮ ತಮ್ಮ ಕುಲಾಚಾರಗಳ ಪ್ರಕಾರ, ಬಂಧು ಬಾಂಧವರ ಸಮ್ಮುಖದಲ್ಲಿ, ಸಮ್ಮತಿಯ ಮುದ್ರೆಯೊಂದಿಗೆ ಸಮಾಜದಲ್ಲಿ



ಅಂಗೀಕೃತವಾಗುತ್ತದೆ. ಕಾನೂನು ಬದ್ಧವಾದ ಮದುವೆ ಕೆಲವೊಮ್ಮೆ, ಬಂಧು ಬಾಂಧವರ ಸಮ್ಮತಿ ಇಲ್ಲದೆ, ಇಷ್ಟ ಬಾಂಧವರ ಸಮ್ಮುಖದಲ್ಲಿ ,ಕಾನೂನಿನ ಮುದ್ರೆಯೊಂದಿಗೆ ಸಮಾಜದಲ್ಲಿ ಅಂಗೀಕೃತವಾಗುತ್ತದೆ .ಒಟ್ಟಿನಲ್ಲಿ ಪ್ರಕೃತಿಯಲ್ಲಿ ಮಾನವ ಜೀವಿ ಸಂತಾನವನ್ನು ಮುಂದುವರಿಸಲು, ಗಂಡು–ಹೆಣ್ಣು ಜೊತೆಯಾಗಿ ಜೀವಿಸಲು ಮದುವೆ ಎಂಬ ಚೌಕಟ್ಟು ಅನಿವಾರ್ಯ.

ಸಾಮಾನ್ಯವಾಗಿ ಶಾಸ್ತ್ರ ಬದ್ಧವಾದ ಮದುವೆಯಲ್ಲಿ ಗಂಡು–ಹೆಣ್ಣು ಕೂಡಿ ಬಾಳುವುದನ್ನು ಮನೆಯ ಹಿರಿಯರು ನಿರ್ಧರಿಸುತ್ತಾರೆ. ಪ್ರೇಮ ಮದುವೆಗಳಲ್ಲಿ ಕೆಲವೊಮ್ಮೆ ಗಂಡು–ಹೆಣ್ಣುಗಳೆ ಕೂಡಿ, ಹಿರಿಯರನ್ನು ಒಪ್ಪಿಸಿ ಶಾಸ್ತ್ರ ಬದ್ಧವಾದ ಮದುವೆಯನ್ನು ಅಂಗೀಕರಿಸುತ್ತಾರೆ. ಮನೆಯ ಹಿರಿಯರು ನಿರ್ಧರಿಸುವ ಮದುವೆಗಳಲ್ಲಿ ಸಹಜವಾಗಿ ಪರಸ್ಪರರ ಸಮಾನವಾದ ಸ್ಥಾನ ,ಮಾನ ,ಅಂತಸ್ತು,ವಿದ್ಯೆ, ಇಂತಹವುಗಳನ್ನು ನೋಡಿ ನಿರ್ಧರಿಸುತ್ತಾರೆ. ಇಲ್ಲಿ ಗಂಡು ಹೆಣ್ಣಿನ ಇಷ್ಟಾನಿಷ್ಟಗಳ ಬಗ್ಗೆ ಹೆಚ್ಚಿನ ಒತ್ತು ಕೊಡುವುದಿಲ್ಲ. ಮದುವೆಯ ನಂತರ, ಹೆಚ್ಚಿನ ಸಂಪ್ರದಾಯಗಳಲ್ಲಿ ಹೆಣ್ಣು, ಗಂಡಿನ ಮನೆಗೆ ಬಂದು ಸಂಸಾರ ಮಾಡಬೇಕಾಗುತ್ತದೆ. ಇಲ್ಲಿ ಹಿರಿಯರು ಜೊತೆಯಲ್ಲಿ ಇದ್ದರೆ , ಹೊಸ ಜೋಡಿಗಳಿಗೆ ತಮ್ಮ ಅನುಭವವನ್ನು ಹಂಚುತ್ತಾರೆ. ಕೂಡಿ ಬಾಳುವುದರ ಬಗ್ಗೆ ಮಾರ್ಗದರ್ಶನ ಸಿಗಬಹುದು. ಆಗ ಹೊಂದಾಣಿಕೆ ಸುಲಭ. ಹೊಸ ಜೋಡಿಗಳ ತಪ್ಪು ಹೆಜ್ಜೆಗಳೇನಾದರೂ ಇದ್ದರೆ, ತಕ್ಷಣವೇ ಹಿರಿಯರ ಗಮನಕ್ಕೆ ಬಂದುಬಿಡುತ್ತದೆ ,ಮತ್ತು ಸಹಜವಾಗಿಯೇ ಕಿರಿಯರು ತಮ್ಮ ನಡೆಯನ್ನು ತಿದ್ದಿಕೊಳ್ಳಲು ಹೆಚ್ಚು ಅವಕಾಶವಿರುತ್ತದೆ.

ಇಷ್ಟ ಬಾಂಧವರ ಸಮ್ಮುಖದಲ್ಲಿ ಕಾನೂನಿನ ಮುದ್ರೆಯೊಂದಿಗೆ ಶುರುವಾಗುವ ದಾಂಪತ್ಯದಲ್ಲಿ, ಸಾಮಾನ್ಯವಾಗಿ, ಗಂಡು–ಹೆಣ್ಣು ಈ ಮುಂಚೆಯೇ ಒಬ್ಬರನ್ನೊಬ್ಬರು ಬಲ್ಲವರಾಗಿರುತ್ತಾರೆ . ಇಬ್ಬರ ಇಷ್ಟಾನಿಷ್ಟಗಳ ಬಗ್ಗೆ ಪರಸ್ಪರ ತಿಳುವಳಿಕೆ ಇರುತ್ತದೆ . ಸಂಸ್ಕಾರವಂತ ಹಿರಿಯರ ಮಾರ್ಗದರ್ಶನವಿದ್ದರೆ, ಕಾನೂನು ಬದ್ಧವಾದ ಮದುವೆಯೂ ಸಹ ಕಾಲಕ್ರಮೇಣ ಬಂಧು ಬಾಂಧವರೊಟ್ಟಿಗೆ ಹೊಂದಾಣಿಕೆಯಿಂದ ಜೀವಿಸಲು



ಸಾಧ್ಯವಾಗುತ್ತದೆ.

ಕೂಡಿ ಬಾಳಲು ಮದುವೆ ಹೇಗೇ ನಡೆದಿರಲಿ ,ಗಂಡು ಹೆಣ್ಣಿನ ದಾಂಪತ್ಯದಲ್ಲಿ ,ಒಬ್ಬರಿಗಾಗಿ ಮತ್ತೊಬ್ಬರು ಎಂಬ ಭಾವ, ಪರಸ್ಪರರಿಗಾಗಿ ಮಾಡುವ ಕೆಲವು ತ್ಯಾಗಗಳು, ದೈವ–ಹಿರಿಯರ ಬಗ್ಗೆ ಗೌರವ, ಹಾಗೂ ಸಂದರ್ಭೋಚಿತವಾಗಿ ಲಭಿಸುವ ಹಿರಿಯರ ಒಳ್ಳೆಯ ಮಾರ್ಗದರ್ಶನ, ಪರಸ್ಪರರ ಬಗೆಗಿನ ಪ್ರೀತಿ ,ಅನುರಾಗ, ನಂಬಿಕೆ ,ಹೊಂದಿಕೊಂಡು ಬಾಳುವ ಗುಣ ,ಇಬ್ಬರಲ್ಲೂ ಇದ್ದು ,ಸಂತಾನವನ್ನು ಪಡೆದು ಸಂಸ್ಕಾರವಂತ ಪೀಳಿಗೆಯನ್ನು ಮುಂದುವರಿಸಿದರೆ ಮದುವೆ ಅನುಬಂಧವಾಗುತ್ತದೆ. ಸಂಸಾರದ ಬಂಧ ಅನುಬಂಧವಾಗಿ ಪರಿವರ್ತಿತವಾಗಲು ಕೆಲವೊಮ್ಮೆ ಸಂತಾನವೂ ಕಾರಣವಾಗುತ್ತದೆ.

ಸ್ವಾರ್ಥ, ಅಪನಂಬಿಕೆ, ಅಕಾರಣ ದ್ವೇಷ, ಕುಟಿಲ ಬುದ್ಧಿ,

ಹಣ, ಸಿರಿವಂತಿಕೆ– ಭೋಗ ವಸ್ತುಗಳ ಬಗ್ಗೆ ಅತಿಯಾದ

ವ್ಯಾಮೋಹ, ಸಂಸ್ಕಾರ ಹೀನ ನಡವಳಿಕೆ, ಹಿರಿಯರ ಬಗ್ಗೆ ಅಗೌರವ, ಇಂತಹವುಗಳು ಮನೆಯ ಹಿರಿಯರು, ಗಂಡು–ಹೆಣ್ಣು ಯಾರೊಬ್ಬರಲ್ಲಿದ್ದರೂ, ದಾಂಪತ್ಯ ಜೀವನ ವಿಷಮಯವಾಗಿ ಮದುವೆ ಬಂಧನವಾಗುತ್ತದೆ. ಇಂತಹ ವಿಷಮ ಸಂಸಾರದಲ್ಲಿ ಪಡೆದ ಸಂತಾನವೂ ಸಮಾಜಘಾತಕವಾಗಿ ಮುಂದುವರೆಯುವ ಅವಕಾಶವೂ ಹೆಚ್ಚಿರುತ್ತದೆ.

ಸ್ವರ್ಣ ಸಂಕೋಲೆಯಾಗಿದ್ದರೂ , 'ಬಂಧನ'

ಪ್ರಪಂಚದಲ್ಲಿ ಯಾವ ಜೀವಿಯೂ ಇಷ್ಟಪಡದ ಸ್ಥಿತಿ.

ಒಳ್ಳೆಯದ್ದನ್ನು– ಕೆಟ್ಟದ್ದನ್ನು ನಿರ್ಧರಿಸುವ ಬುದ್ಧಿ ಇರುವ ಮಾನವ ಜೀವಿ, ಭೂಮಿಯ ಮೇಲಿರುವ ಅಲ್ಪಕಾಲವನ್ನು ನೆಮ್ಮದಿಯಿಂದ ಜೀವಿಸುತ್ತಾ ,ತನ್ನೊಂದಿಗಿರುವ ಮತ್ತೊಂದು ಮಾನವ ಜೀವಿಯನ್ನು ಹಿಂಸಿಸದೆ ,ಕೊಟ್ಟು– ಪಡೆದುಕೊಳ್ಳುವ ಆದರ– ಗೌರವದೊಂದಿಗೆ ಬಾಳಿದರೆ, ಮದುವೆ ಅನುಬಂಧ, ಇಲ್ಲದಿದ್ದರೆ ಬಂಧನ.

# ವಿಕಲಚೇತನ ರಿಯಾಯತಿ ಬಸ್‌ಪಾಸ್ ನವೀಕರಿಸಲು ಅರ್ಜಿ

ಉದಯರಶ್ಮಿ ನ್ಯೂಸ್

ವಿಜಯಪುರ: 2024ನೇ ಸಾಲಿಗೆ ವಿಕಲಚೇತನ ರಿಯಾಯತಿ ಬಸ್ ಪಾಸುಗಳನ್ನು ನವಿಕರಿಸಿಕೊಳ್ಳುವಂತೆ ವಿಜಯಪುರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಯನ್ನು ನೋಂದಾಯಿಸಿ, ನಿಗದಿತ ಅವಧಿಯೊಳಗೆ ತಮ್ಮ ತಾಲೂಕಿನ ವ್ಯಾಪ್ತಿಯ ಬಸ್ ನಿಲ್ದಾಣದ ಕಚೇರಿಯಲ್ಲಿ ರೂ.660 ಶುಲ್ಕವನ್ನು ಭರಿಸಿ ಬಸ್ ಪಾಸ್ ನವೀಕರಿಸಿಕೊಳ್ಳಬಹುದಾಗಿದೆ. ಪಾಸು ನವೀಕರಣಗೊಳ್ಳುವವರೆಗೂ 2023ನೇ ಸಾಲಿನ ಹಳೆಯ ಬಸ್ ಪಾಸ್‌ನ್ನು ದಿನಾಂಕ 29–02–2024ರವರೆಗೆ ಬಳಸಲು ಮಾನ್ಯತೆ ನೀಡಲಾಗಿದೆ

# ಸೇತುವೆಯಿಂದ ಬಿದ್ದು ಮಹಿಳೆ ಆತ್ಮಹತ್ಯೆ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಇಲ್ಲಿಯ ಕೃಷ್ಣಾ ನದಿ ಹಿನ್ನೀರಿನ ಪಾರ್ವತಿ ಕಟ್ಟಾ ಸೇತುವೆ (ಬೇನಾಳ ಬ್ರಿಜ್) ಮೇಲಿಂದ ಬಿದ್ದು ಮಹಿಳೆಯೊಬ್ಬಳು ಆತ್ಮಹತ್ಯೆ ಮಾಡಿಕೊಂಡ ಘಟನೆ ಮಂಗಳವಾರ ಜರುಗಿದೆ.

ಮೃತಳು ಸಮೀಪದ ವಂದಾಲ ಗ್ರಾಮದ ದೀಪಾ ರಾಘವೇಂದ್ರ ವಡವಡಗಿ (34) ಎಂದು ತಿಳಿದುಬಂದಿದೆ. ಮೃತ ಮಹಿಳೆಗೆ ಪುತ್ರ, ಪುತ್ರಿ ಇದ್ದಾರೆ.

ನಿಡಗುಂದಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.2

# ಚಡಚಣ ಪಪಂ: ಶೌಚಾಲಯಕ್ಕೆ ಅರ್ಜಿ ಆಹ್ವಾನ

ಉದಯರಶ್ಮಿ ನ್ಯೂಸ್

ಚಡಚಣ: ಸ್ವಚ್ಛ ಭಾರತ್ ಮಿಷನ್ (ನಗರ) 1.0 ಯೋಜನೆಯಡಿ ಬಯಲು ಶೌಚಮುಕ್ತ ನಗರ ಪ್ರದೇಶಗಳಾಗಿ ಘೋಷಿಸಲಾಗಿರುತ್ತದೆ. ಇತ್ತೀಚೆಗೆ ದಿನೇ ದಿನೇ ನಗರ ವ್ಯಾಪ್ತಿಯು ಹೆಚ್ಚಾಗುತ್ತಿರುವದರಿಂದ ಕೇಂದ್ರ ಸರ್ಕಾರವು ನಗರ ಪ್ರದೇಶಗಳಲ್ಲಿ ನೈರ್ಮ್ಯಲೀಕರಣ, ಸ್ವಚ್ಛತೆ ಮತ್ತು ಶುಚಿತ್ವದ ಮೇಲೆ ಹೆಚ್ಚು ಗಮನಹರಿಸಿ ಸ್ವಚ್ಛ ಭಾರತ್ ಮಿಷನ್ (ನಗರ)2.0 ಯೋಜನೆಯಡಿ, ಚಡಚಣ ಪಟ್ಟಣ ಪಂಚಾಯತಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ 90 ಸೀಟ್ ಶೌಚಾಲಯ ನಿರ್ಮಾಣ ಮಾಡಲು ಮಂಜೂರಿಯಾಗಿದ್ದು, ಸದರಿ ಶೌಚಾಲಯ ನಿರ್ಮಾಣಕ್ಕೆ ಅರ್ಹ ಫಲಾನುಭವಿಗಳಿಂದ ಅರ್ಜಿ ಕರೆಯಲಾಗಿರುತ್ತದೆ ಎಂದು ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿ ಶಿವಾನಂದ ಪೂಜಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ಫಲಾನುಭವಿಗಳು ಜ.17 ಸಂಜೆ 5.30ರೊಳಗೆ ಪಟ್ಟಣ ಪಂಚಾಯ್ತಿ ಕಾರ್ಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಲು ತಿಳಿಸಿದ ಅವರು, ಅರ್ಜಿಗಳು ಪಟ್ಟಣ ಪಂಚಾಯತಿಯ ಆರೋಗ್ಯ ವಿಭಾಗದಲ್ಲಿ ಲಭ್ಯವಿರುತ್ತದೆ ಎಂದು ತಿಳಿಸಿದ್ದಾರೆ .

# ಜ.13ರಿಂದ ಫಲ–ಪುಷ್ಪ ಪ್ರದರ್ಶನ & ತೋಟಗಾರಿಕೆ ಅಭಿಯಾನ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ತೋಟಗಾರಿಕೆ ಇಲಾಖೆ, ವಿಜಯಪುರ ಜಿಲ್ಲಾ ತೋಟಗಾರಿಕೆ ಸಂಘ (ರಿ), ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ, ಇಂಡಿ ಹಾಗೂ ಜಿಲ್ಲಾ ಹಾಪ್ ಕಾಮ್ಸ್ ವಿಜಯಪುರ ಇವರ ಸಹಯೋದಲ್ಲಿ, ಜಿಲ್ಲಾ ತೋಟಗಾರಿಕೆ ಕಚೇರಿ ಆವರಣದ ಬಸವ ವನದಲ್ಲಿ ಜನವರಿ 13ರಿಂದ 15ರವರೆಗೆ 2023–24ನೇ ಸಾಲಿನ ಫಲ–ಪುಷ್ಪ ಪ್ರದರ್ಶನ ಹಾಗೂ ತೋಟಗಾರಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಜನವರಿ 13ರಂದು ಮಧ್ಯಾಹ್ನ 4 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಫಲ–ಪುಷ್ಪ ಪ್ರದರ್ಶನದ ಕಾರ್ಯಕ್ರಮದ ಉದ್ಘಾಟನೆಯನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ. ಪಾಟೀಲ ಅವರು ನೇರವೇರಿಸಲಿದ್ದಾರೆ.

ಹಣ್ಣು ಮತ್ತು ತರಕಾರಿ ಪ್ರದರ್ಶನ ಕಾರ್ಯಕ್ರಮವನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕರು, ವಿಧಾನ ಪರಿಷತ್ತು ಹಾಗೂ ಸರ್ಕಾರದ ವಿಶೇಷ ಪ್ರತಿನಿಧಿ–2 ಆದ ಪ್ರಕಾಶ ಹುಕ್ಕೇರಿ, ಸಂಸದರಾದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ವಿ. ಪಾಟೀಲ, ಹಣಮಂತ್ ಆರ್. ನಿರಾಣಿ, ಪ್ರಕಾಶ ರಾಥೋಡ. ಸುನೀಲಗೌಡ ಬಿ. ಪಾಟೀಲ, ಪಿ.ಎಚ್.ಪೂಜಾರ, ಸಿ.ಎಸ್. ನಾಡಗೌಡ, ವಿಠ್ಠಲ ಕಟಕದೊಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ವಿಜಯಪುರ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ದಾನಮ್ಮ ಪಾಟೀಲ ಉಪಸ್ಥಿತರಿರಲಿದ್ದಾರೆ.

ಕಾರ್ಯಕ್ರಮದ ವಿಶೇಷ ಅಹ್ವಾನಿತರಾಗಿ ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಶಾಮ್ಲಾ ಇಕ್ಬಾಲ್, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ರಿಚರ್ಡ್ ವಿನ್ಸೆಂಟ್ ಡಿಸೋಜ, ತೋಟಗಾರಿಕೆ ಇಲಾಖೆಯ ನಿರ್ದೇಶಕರಾದ ಡಿ.ಎಸ್. ರಮೇಶ್, ಜಿಲ್ಲಾಧಿಕಾರಿಗಳಾದ ಟಿ. ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ, ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಋಷಿಕೇಶ ಸೋನಾವಣೆಣಟಿಜಜಜಿಟಿಜಜ, ಬೆಳಗಾವಿ ವಿಭಾಗದ ತೋಟಗಾರಿಕೆ ಜಂಟಿ ನಿರ್ದೇಶಕರಾದ ಸೋಮಶೇಖರ ಹುಲ್ಲೊಳ್ಳಿ, ವಿಜಯಪುರ ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ನರೇಂದ್ರ ಬಾಬು ಎನ್.ವ್ಹಿ, ರಾಷ್ಟ್ರೀಯ ತೋಟಗಾರಿಕೆ ಮಂಡಳಿಯ ಆಡಳಿತ ಮಂಡಳಿ ನಿರ್ದೇಶಕರಾದ ಬಿ.ಎಮ್. ಕೋಕರೆ, ಪುಣೆಯ ರಾಷ್ಟ್ರೀಯ ದ್ರಾಕ್ಷಿ ಸಂಶೋಧನಾ ಕೇಂದ್ರದ ಆಡಳಿತ ಮಂಡಳಿ ನಿರ್ದೇಶಕರಾದ ಸಂಜಯ ಪಾಟೀಲ, ವಿಜಯಪುರ ಹಾಪ್‌ಕಾಮ್ಸ್ ಅಧ್ಯಕ್ಷರಾದ ಸುಭಾಷಗೌಡ ಬ. ಪಾಟೀಲ ಆಗಮಿಸಲಿದ್ದಾರೆ.

ಜ.14ರಿಂದ 15ರವರೆಗೆ ಬೆಳಗ್ಗೆ 11 ರಿಂದ ಸಾಯಂಕಾಲ 5 ಗಂಟೆಯವರೆಗೆ ತೋಟಗಾರಿಕೆ ಇಲಾಖೆಯ ಬಸವ ವನದಲ್ಲಿ ಶಾಲಾ ಮಕ್ಕಳಿಗೆ ತೋಟಗಾರಿಕೆ ಪರಿಕರ ವಿತರಣೆ ಹಾಗೂ ತರಬೇತಿ ಕಾರ್ಯಕ್ರಮ ಹಾಗೂ ಲಿಂಬೆ ಬೆಳೆಗಾರರ ವಿಚಾರ ಸಂಕಿರಣ ಕಾರ್ಯಕ್ರಮ ನಡೆಯಲಿದೆ.

ವಿಜಯಪುರ ಜಿಲ್ಲಾಧಿಕಾರಿಗಳಾದ ಟಿ. ಭೂಬಾಲನ್ ಅವರು ಉದ್ಘಾಟಿಲಿದ್ದು, ಕಾರ್ಯಕ್ರಮದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಅತಿಥಿಗಳಾಗಿ ವಿಜಯಪುರ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎನ್. ಎಚ್. ನಾಗೂರ, ವಿಜಯಪುರ ಜಂಟಿ ಕೃಷಿ ನಿರ್ದೇಶಕರಾದ ರಾಜಶೇಖರ ವಿಲಿಯಮ್ಸ್, ಉಪನ್ಯಾಸಕರಾಗಿ ಹಿರಿಯ ವಿಜ್ಞಾನಿ ಹಾಗೂ ತಿಡಗುಂದಿ ತೋಟಗಾರಿಕೆ ಸಂಶೋಧನ ಮತ್ತು ವಿಸ್ತರಣ ಕೇಂದ್ರದ ಮುಖ್ಯಸ್ಥರಾದ ಡಾ. ಹಿಪ್ಪರಗಿ, ಹಿರಿಯ ವಿಜ್ಞಾನಿ ಹಾಗೂ ಹಿಟ್ನಳ್ಳಿ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರಾದ ಡಾ.ಶ್ರೀಶೈಲ ಎಂ. ವಸ್ತ್ರದ ಭಾಗವಹಿಸಲಿದ್ದಾರೆ.

ಜ.15ರಂದು ಸಂಜೆ 6 ಗಂಟೆಗೆ ತೋಟಗಾರಿಕೆ ಇಲಾಖೆಯ ಬಸವ ವನದಲ್ಲಿ ಬಹುಮಾನ ವಿತರಣೆ ಸಮಾರಂಭ ನಡೆಯಲಿದೆ.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ವಹಿಸಲಿದ್ದಾರೆ. ಅತಿಥಿಗಳಾಗಿ ವಿಜಯಪುರ ಜಿಲ್ಲಾಧಿಕಾರಿಗಳಾದ ಟಿ. ಭೂಬಾಲನ್, ವಿಜಯಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ, ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಋಷಿಕೇಶ ಸೋನಾವಣೆ, ವಿಜಯಪುರ ಮಹಾನಗರ ಪಾಲಿಕೆ ಆಯುಕ್ತರಾದ ಬದರುದ್ದಿನ್ ಅ. ಸೌದಾಗರ, ವಿಜಯಪುರ ಜಂಟಿ ಕೃಷಿ ನಿರ್ದೇಶಕರಾದ ರಾಜಶೇಖರ ವಿಲಿಯಮ್ಸ್, ಕರ್ನಾಟಕ ಅಭಿವೃದ್ಧಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಭಾವಿದೊಡ್ಡಿ ರಾಹುಲಕುಮಾರ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕರಾದ ಇರಫಾನ ಭಾಂಗಿ, ರೇಷ್ಮೆ ಇಲಾಖೆಯ ಉಪನಿರ್ದೇಶಕರಾದ ಸಿದ್ದರಾಜು ಎಸ್, ಪಶುಸಂಗೋಪನಾ ಮತ್ತು ಪಶುವೈದ್ಯ ಇಲಾಖೆಯ ಉಪನಿರ್ದೇಶಕರಾದ ಅಶೋಕ ಘೋಣಸಗಿ, ಹಿರಿಯ ವಿಜ್ಞಾನಿ ಹಾಗೂ ತಿಡಗುಂದಿ ತೋಟಗಾರಿಕೆ ಸಂಶೋಧನ ಮತ್ತು ವಿಸ್ತರಣ ಕೇಂದ್ರದ ಮುಖ್ಯಸ್ಥ ಡಾ.ಕುಲಪತಿ ಹಿಪ್ಪರಗಿ, ಹಿಟ್ನಳ್ಳಿ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರಾದ ಡಾ.ಶ್ರೀಶೈಲ ಎಂ. ವಸ್ತ್ರದ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕಾವ್ಯರಶ್ಮಿ

ಶ್ರೀಮತಿ ಖೈರುನ್ನಿಸಾ ಡಿ ಹೆಚ್
ಶಿಕ್ಷಕಿ ಜಗಳೂರು ದಾವಣಗೆರೆ ಜಿಲ್ಲೆ
("ನಮ್ಮ ಕಥಾ ಅರಮನೆ" ಬರಹಗಾರರು)



### ನೀನಿರಲು ಜೊತೆಯಲಿ

ಬೀಸಿದ್ದೆ ಆ ದಿನ ಪ್ರೀತಿಯ ಬಲೆ
ಮೀನಾಗಿ ನಾ ಬಿದ್ದ ಒಲವಿನ ಸೆಲೆ
ನೀ ಸೆಳೆದೆನ್ನ ಆ ತುಂಟ ನಗುವಲೆ
ಇಂದಿಗೂ ನಾ ನೆನೆವೆನದ ಮನದಲಿ

ಕೊರೆವ ಚುಮುಚುಮು ಚಳಿಯಲಿ
ಬೆಚ್ಚನೆ ನಿನ್ನ ಮಡಿಲ ಅಪ್ಪುಗೆಯಲಿ
ಮಳೆಯ ಹನಿ ಧರೆಗೆ ಮುತ್ತಿಕ್ಕುವಂತೆ
ನೀನಿತ್ತೆ ಗಲ್ಲದ ತುಂಬ ಮುತ್ತಿನ ಕಂತೆ

ಮಳೆಗೂ ಪ್ರೀತಿಗೂ ಆದೇನೋ ಬಂಧ



ಒಲವೇ ನಮ್ಮದು ಬಿಡಿಸದ ಅನುಬಂಧ
ನೀ ನನ್ನ ಕೈಹಿಡಿದ ಸವಿ ಘಳಿಗೆ ನೆನೆದು
ನನ್ನೀ ಕದಪು ಇಂದಿಗೂ ಕೆಂಪೇರುವುದು

ಬಾಳು ಹಸಿರು ನೀನಿರಲು ಜೊತೆಯಲಿ
ಉಕ್ಕುಕ್ಕಿತು ಪ್ರೇಮದ ಗಂಗೆ ಎದೆಯಲಿ
ಮೇಣದಂತೆ ಕರಗಿ ಹೋದೆ ನಿನ್ನೊಲವಿಗೆ
ಅರಸಿಯಾದೆ ನಿನ್ನಯ ಪ್ರೇಮ ಮಹಲಿಗೆ